ಕನ್ನಡ ದಿನಪತ್ರಿಕೆ
29 ಮಾರ್ಚ್ । ಶುಕ್ರವಾರ
29 MARCH 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನೆಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ - 5 ಸಂಚಿಕೆ - 36 ಪುಟ - 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಗೋಕಾಕ, ಅರಬಾವಿಯಲ್ಲಿ ಕಾಂಗ್ರೆಸ್ ಗೆ ಭರ್ಜರಿ ರೆಸ್ಪಾನ್ಸ್: ಬಿಜೆಪಿ ವಿರುದ್ಧ ಸತೀಶ್ ಜಾರಕಿಹೊಳಿ, ಲಕ್ಷ್ಮೀ ಹೆಬ್ಬಾಳಕರ್ ವಾಗ್ದಾಳಿ

ಬೆಳಗಾವಿ: ಬಿಜೆಪಿಯವರು ಮೋದಿ ಗ್ಯಾರಂಟಿ ಮೋದಿ ಗ್ಯಾರಂಟಿ ಎನ್ನುತ್ತಿದ್ದಾರೆ. ಮೋದಿ ನಾನೇ ಗ್ಯಾರಂಟಿ ಎನ್ನುತ್ತಿದ್ದಾರೆ. ಇವರ ಮೇಲೆ ಯಾವ ಗ್ಯಾರಂಟಿ ಇಟ್ಟುಕೊಳ್ಳಲು ಸಾಧ್ಯ? ಇಲ್ಲಿಯವರೆಗೆ ನೀಡಿದ್ದ ಆಶ್ವಾಸನೆಗಳಲ್ಲಿ ಯಾವುದನ್ನು ಈಡೇರಿಸಿದ್ದಾರೆ? ಎಂದು ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಬೆಳಗಾವಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಗೋಕಾಕ ಮತ್ತು ಅರಬಾವಿ ವಿಧಾನ ಸಭಾ ಕ್ಷೇತ್ರದ ಕಾರ್ಯಕರ್ತರ ಸಭೆಯನ್ನುದ್ಧೇಶಿಸಿ ಅವರು ಮಾತನಾಡುತ್ತಿದ್ದರು.

ಕಾಂಗ್ರೆಸ್ ಸರಕಾರದ ಭರವಸೆ ನೀಡಿದ್ದ ಎಲ್ಲ ಗ್ಯಾರಂಟಿಗಳನ್ನು ಈಡೇರಿಸಿದೆ. ಅವುಗಳನ್ನು ಸಮರ್ಪಕವಾಗಿ ಜನರಿಗೆ ತಲುಪಿಸುವ ಕೆಲಸವನ್ನೂ ಮಾಡಿದೆ. ಎಲ್ಲ ಗ್ಯಾರಂಟಿಗಳಿಂದಲೂ ಜನರಿಗೆ ಪ್ರಯೋಜನವಾಗಿದೆ. ಹಾಗಾಗಿ ಈ ಬಾರಿ ಎಲ್ಲರೂ ಒಂದಾಗಿ ಕೆಲಸ ಮಾಡಬೇಕು. ಕೇಂದ್ರದಲ್ಲಿ ನಮ್ಮ ಸರಕಾರ ಅಧಿಕಾರಕ್ಕೆ ಬರುವಂತೆ ಮಾಡಬೇಕು ಎಂದು ಅವರು ಹೇಳಿದರು.



ಕೇವಲ ಭಾವನೆಗಳ ಮೇಲೆ ಜನರು ಬದುಕಲು ಸಾಧ್ಯವಿಲ್ಲ. ಬಿಜೆಪಿಯವರ ಯೋಜನೆಗಳು ಕೇವಲ ಘೋಷಣೆ ಮಾಡುವುದಕ್ಕೆ ಮಾತ್ರ ಸೀಮಿತ. ಅವುಗಳು ಎಂದಿಗೂ ಜಾರಿಯಾಗುವುದಿಲ್ಲ. ದೇಶದಲ್ಲಿ ಎಲ್ಲ ಕ್ಷೇತ್ರಗಳಲ್ಲಿ ಅಭಿವೃದ್ಧಿಯಾಗಬೇಕು. ಅದು ಕಾಂಗ್ರೆಸ್ ನಿಂದ ಮಾತ್ರ ಸಾಧ್ಯ. ಹಾಗಾಗಿ ಉತ್ಸಾಹಿ ಯುವಕರಾಗಿರುವ ಮೃಮಾಲ ಹೆಬ್ಬಾಳಕರ್ ಅವರಿಗೆ ಮತ ನೀಡಿ ಬಹುಮತದಿಂದ ಆರಿಸಿಕಳಿಸಿ ಎಂದು ವಿನಂತಿಸಿದರು.

**ನೆರವಿಗೆ ಬಾರದ ಬಿಜೆಪಿ - ಲಕ್ಷ್ಮೀ ಹೆಬ್ಬಾಳಕರ್**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿ, ಬೆಳಗಾವಿ ಕ್ಷೇತ್ರದಲ್ಲಿ ಮೃಣಾಲ ಹೆಬ್ಬಾಳಕರ್ ಮತ್ತು ಚಿಕ್ಕೋಡಿ ಕ್ಷೇತ್ರದಲ್ಲಿ ಪ್ರಿಯಾಂಕಾ ಜಾರಕಿಹೊಳಿ ಕಣಕ್ಕಿಳಿದಿದ್ದಾರೆ.

ಇಬ್ಬರೂ ಉತ್ಸಾಹಿಗಳಿದ್ದು, ಕ್ಷೇತ್ರವನ್ನು ಅಭಿವೃದ್ಧಿಯ ಪಥದಲ್ಲಿ ಕೊಂಡೊಯ್ಯಲಿದ್ದಾರೆ.

ಇಡೀ ರಾಷ್ಟ್ರದ ಗಮನ ಸೆಳೆದಿರುವ ಈ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷವನ್ನು ಅತ್ಯಂತ ಹೆಚ್ಚು ಬಹುಮತದಿಂದ ಆರಿಸಿ ಕಳಿಸಬೇಕು ಎಂದು ವಿನಂತಿಸಿದರು.

ಕೋವಿಡ್ ಬಂದಾಗ ಕೇಂದ್ರದ ಬಿಜೆಪಿ ಸರಕಾರ ಯಾವುದೇ ರೀತಿಯಲ್ಲಿ ರಾಜ್ಯದ ನೆರವಿಗೆ ಬರಲಿಲ್ಲ. ಈ ಭಾಗವನ್ನು ಪ್ರತಿನಿಧಿಸುವ ಸಂಸದರು ದೆಹಲಿಯಲ್ಲಿ ಧ್ವನಿ ಎತ್ತಿದ್ದನ್ನು ಯಾರಾದರೂ ನೋಡಿದ್ದಾರಾ? ಸಂಕಷ್ಟದ ಸಂದರ್ಭದಲ್ಲಿ ಯಾರು ನ್ಯಾಯವನ್ನು ಒದಗಿಸಬೇಕಿತ್ತೋ ಅವರು ನಮ್ಮ ಸಹಾಯಕ್ಕೆ ಬರಲಿಲ್ಲ. ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ 135 ಸ್ಥಾನಗಳನ್ನು ಗೆಲ್ಲುವ ಮೂಲಕ ಇತಿಹಾಸವನ್ನು ನಿರ್ಮಾಣ ಮಾಡಿದೆ. ಅಧಿಕಾರಕ್ಕೆ ಬಂದ ತಕ್ಷಣ ರಾಜ್ಯದ ಜನರ ನೆರವಿಗೆ ಬಂದಿದೆ ಎಂದು ಹೆಬ್ಬಾಳಕರ್ ಹೇಳಿದರು.

ಬಿಜೆಪಿ ಸರಕಾರದ ಅವಧಿಯಲ್ಲಿ ಮಹಿಳೆಯರು ಸಂಕಷ್ಟದಲ್ಲಿದ್ದರು, ಬೆಲೆ ಏರಿಕೆಯಾಗಿತ್ತು, ಪೆಟ್ರೋಲ್, ಡಿಸೆಲ್ ಬೆಲೆ ಏರಿತ್ತು. ಕೋವಿಡ್ ಬಂದು ಮತ್ತಷ್ಟು ಸಮಸ್ಯೆ ತಂದಿತ್ತು. ಜನರಿಗೆ ನೆಮ್ಮದಿ ನೀಡಲು ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ ಅವರು ಪಂಚ ಗ್ಯಾರಂಟಿಗಳನ್ನು ಜಾರಿಗೆ ತಂದರು. ಕಾಂಗ್ರೆಸ್ ನಿಂದ ಮಾತ್ರ ಅಭಿವೃದ್ಧಿ ಸಾಧ್ಯ, ಕಾಂಗ್ರೆಸ್ ಪಕ್ಷ ಕೊಟ್ಟ ವಚನವನ್ನು ಪಾಲನೆ ಮಾಡುವ ಪಕ್ಷ. ಹಾಗಾಗಿ ಎರಡೂ ಕ್ಷೇತ್ರಗಳಲ್ಲಿ ಅಭಿವೃದ್ಧಿಯ ಪತಾಕೆ ಹಾರಿಸುವ ಕೆಲಸವನ್ನು ಮಾಡಬೇಕು. ಲೋಕಸಭಾ ಚುನಾವಣೆ ನಂತರ ಗ್ಯಾರಂಟಿ ಯೋಜನೆಗಳು ಸ್ಥಗಿತವಾಗುತ್ತವೆ ಎನ್ನುವ ಬಿಜೆಪಿಯವರ ಅಪಪ್ರಚಾರಕ್ಕೆ ಯಾರೂ ಕಿವಿಗೊಡಬೇಕಾಗಿಲ್ಲ. ಐದೂ ಗ್ಯಾರಂಟಿಗಳು ನಿರಂತರವಾಗಿ ನಡೆಯುತ್ತವೆ, ಅಭಿವೃದ್ಧಿ ಕೆಲಸಗಳೂ ನಿರಂತರವಾಗಿರುತ್ತವೆ ಎಂದು ಅವರು ತಿಳಿಸಿದರು.



## ಕೆಎಸ್ಆರ್‌ಟಿಸಿ ಬಸ್ ನಲ್ಲಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 5 ಲಕ್ಷ ಹಣ ಜಪ್ತಿ

ಗದಗ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಚುನಾವಣಾ ಅಧಿಕಾರಿಗಳು ಅಕ್ರಮ ಹಣ ಸಾಗಾಟಕ್ಕೆ ಕಡಿವಾಣ ಹಾಕಿದ್ದು, ಕೆ ಎಸ್ ಆರ್ ಟಿ ಸಿ ಬಸ್ ನಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 5 ಲಕ್ಷ ಹಣವನ್ನು ಚುನಾವಣಾ ಅಧಿಕಾರಿಗಳು ವಶಕ್ಕೆ ಪಡೆದ್ದಾರೆ.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ದೇಶಾದ್ಯಂತ ನೀತಿ ಸಂಹಿತೆ ಜಾರಿಯಾಗಿದೆ. ದಾಖಲೆಗಳಿಲ್ಲದೇ ಯಾವುದೇ ವಸ್ತು, ಹಣ ಸಾಗಿಸುವಂತಿಲ್ಲ. ಕೆ ಎಸ್ ಆರ್ ಟಿ ಸಿ ಬಸ್ ನಲ್ಲಿ ದಾಖಲೆ ಇಲ್ಲದೇ 5 ಲಕ್ಷ ಹಣ ಸಾಗಿಸುತ್ತಿದ್ದ ಪ್ರಕರಣ ಗದಗ ಜಿಲ್ಲೆಯ ಲಕ್ಷ್ಮೇಶ್ವರದಲ್ಲಿ ಬೆಳಕಿಗೆ ಬಂದಿದೆ.

ಬಸ್ ತಪಾಸಣೆ ನಡೆಸಿದ ಅಧಿಕಾರಿಗಳು ಅಕ್ರಮವಾಗಿ ಸಾಗಿಸುತ್ತಿದ್ದ 5 ಲಕ್ಷ ಹಣ ಜಪ್ತಿ ಮಾಡಿದ್ದಾರೆ. ಹುಬ್ಬಳ್ಳಿ ಮೂಲದ ಸೈಯ್ಯದ್ ಎಂಬಾತ ಈ ಹಣವನ್ನು ಲಕ್ಷ್ಮೇಶ್ವರಕ್ಕೆ ಕೊಂಡೊಯ್ಯುತ್ತಿದ್ದ ಎಂದು ತಿಳಿದುಬಂದಿದೆ. ಲಕ್ಷ್ಮೇಶ್ವರ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಆತ್ಮಹತ್ಯೆಗೆ ಯತ್ನಿಸಿದ್ದ ಸಂಸದ ಸಾವು



ತಮಿಳುನಾಡು: ಆತ್ಮಹತ್ಯೆಗೆ ಯತ್ನಿಸಿ ಆಸ್ಪತ್ರೆಗೆ ದಾಖಲಾಗಿದ್ದ ಈರೋಡ್‌ನ ಎಂಡಿಎಂಕೆ ಸಂಸದ ಗಣೇಶಮೂರ್ತಿ ಇಂದು ಬೆಳಗ್ಗೆ 5:05ಕ್ಕೆ ಹೃದಯಾ ಘಾತದಿಂದ ನಿಧನರಾಗಿದ್ದಾರೆ.

ಮಾರ್ಚ್ 24 ರಂದು ತಮಿಳುನಾಡಿನ ಈರೋಡ್ ಕ್ಷೇತ್ರದ ಹಾಲಿ ಎಂಡಿ-ಎಂಕೆ ಸಂಸದ ಎ ಗಣೇಶಮೂರ್ತಿ (76) ಆತ್ಮಹತ್ಯೆಗೆ ಯತ್ನಿಸಿದ್ದರು. ಅವರನ್ನು ಚಿಕಿತ್ಸೆಗಾಗಿ ಕೊಯಮತ್ತೂರಿನ ಖಾಸಗಿ ಆಸ್ಪತ್ರೆಗೆ ಭಾನುವಾರ ದಾಖಲು ಮಾಡಲಾಗಿತ್ತು. ಅವರು ಕೀಟನಾಶಕ 'ಸಲ್ಫಸ್' ಸೇವಿಸಿದ್ದರು ಎನ್ನುವುದು ಪ್ರಾಥಮಿಕ ತನಿಖೆಯಿಂದ ಬೆಳಕಿಗೆ ಬಂದಿತ್ತು.

ಬೆಳಗ್ಗೆ 10.15ರ ಸುಮಾರಿಗೆ ಗಣೇಶಮೂರ್ತಿ ಅವರು ವಾಂತಿ ಮಾಡಿಕೊಂಡರು. ಆಗ ನೀರು ಬೆರೆಸಿದ ಕೀಟನಾಶಕ ಸೇವನೆ ಮಾಡಿರುವುದಾಗಿ ಅವರು ನಮಗೆ ತಿಳಿಸಿದ್ದರು ಎಂದು ಕುಟುಂಬದ ಸದಸ್ಯರೊಬ್ಬರು ಹೇಳಿದ್ದರು.

ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಈರೋಡ್ ಲೋಕಸಭೆ ಕ್ಷೇತ್ರದಿಂದ ಗಣೇಶಮೂರ್ತಿ ಅವರಿಗೆ ಟಿಕೆಟ್ ನೀಡಲು ಎಂಡಿಎಂಕೆ ಪಕ್ಷದ ಹೈ ಕಮಾಂಡ್ ನಿರಾಕರಿಸಿದೆ. ಇದರಿಂದ ನೊಂದ ಅವರು ಆತ್ಮಹತ್ಯೆಗೆ ಯತ್ನಿಸಿರಬಹುದು ಎಂದು ಪಕ್ಷದ ಕೆಲವರು ಅಭಿಪ್ರಾಯ ವ್ಯಕ್ತಪಡಿಸಿದ್ದರು.



## ವಿವಿಧ ಜಿಲ್ಲೆಗಳಲ್ಲಿ ಮುಂದಿನ 5 ದಿನ ಭಾರೀ ಮಳೆ

ಬೆಂಗಳೂರು: ರಾಜ್ಯದಲ್ಲಿ ಪ್ರಖರ ಬಿಸಿಲಿನ ಮಧ್ಯೆಯೇ ಹವಾಮಾನ ಇಲಾಖೆ ಮಳೆಯ ಮುನ್ಸೂಚನೆ ನೀಡಿದೆ.

ಮುಂದಿನ 5 ದಿನ (ಮಾ. 28 - ಏಪ್ರಿಲ್ 1) ಉತ್ತರ ಮತ್ತು ದಕ್ಷಿಣ ಒಳನಾಡಿನ ಕೆಲವು ಕಡೆ ಗುಡುಗು-ಮಿಂಚು ಸಹಿತ ಸಾಧಾರಣದಿಂದ ಭರ್ಜರಿ ಮಳೆಯಾಗುವ ಸಾಧ್ಯತೆ ಇದೆ. ಆದರೆ, ಬೆಂಗಳೂರಿನಲ್ಲಿ ಮಾತ್ರ ಸೆಕೆ ಇನ್ನಷ್ಟು ಹೆಚ್ಚಾಗುವ ನಿರೀಕ್ಷೆಯಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಹಾವೇರಿ, ಧಾರವಾಡ, ಬೆಳಗಾವಿ, ಶಿವಮೊಗ್ಗ ಮತ್ತು ದಾವಣಗೆರೆಯಲ್ಲಿ ಮಳೆಯಾಗಬಹುದು ಎನ್ನಲಾಗಿದೆ.

## ಕೃಷಿ ಇಲಾಖೆ ಉಪ ನಿರ್ದೇಶಕ ಸಹದೇವ ಯರಗುಪ್ಪಾ ಮನೆ ಮೇಲೆ ಲೋಕಾಯುಕ್ತ ದಾಳಿ

ಕೊಪ್ಪಳ: ಬೆಳ್ಳಂಬೆಳಗ್ಗೆ ಕೃಷಿ ಇಲಾಖೆಯ ಉಪ ನಿರ್ದೇಶರ ನಿವಾಸಕ್ಕೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ.

ಬೆಳಿಗ್ಗೆ ಗದಗ ಲೋಕಾಯುಕ್ತ ಅಧಿಕಾರಿಗಳ ತಂಡ ಕೊಪ್ಪಳ ಕೃಷಿ ಇಲಾಖೆ ಉಪ ನಿರ್ದೇಶಕ ಸಹದೇವ ಯರಗುಪ್ಪಾ ಅವರ ಕೊಪ್ಪಳ ನಗರದ ಬಿ ಟಿ ಪಾಟೀಲ್ ನಗರದಲ್ಲಿನ ಬಾಡಿಗೆ ಮನೆ ಹಾಗೂ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಕಚೇರಿ ಮೇಲೆ ದಾಳಿ ನಡೆಸಿ ದಾಖಲೆ ಪತ್ರಗಳನ್ನು ಪರಿಶೀಲನೆ ನಡೆಸುತ್ತಿದೆ.

ಸಹದೇವ ಯರಗುಪ್ಪಾ ಅವರು ಕಳೆದ ಎರಡು ವರ್ಷಗಳಿಂದ ಕೊಪ್ಪಳ ಕೃಷಿ ಇಲಾಖೆ ಉಪ ನಿರ್ದೇಶಕರಾಗಿರುವ ಹಿನ್ನೆಲೆಯಲ್ಲಿ ಅವರ ಮನೆ ಹಾಗೂ ಕಚೇರಿಗಳ ಮೇಲೆ ದಾಳಿ ನಡೆಸಿ ಕಡತಗಳ ಪರಿಶೀಲನೆ ನಡೆಸುತ್ತಿದೆ.

## ಬೆಳಗಾವಿ ಜಿಲ್ಲೆಯ ಜನರನ್ನು ಬಕ್ರಾ ಮಾಡೋಕೆ ಬಂದಿದ್ದಾರಾ ಶೆಟ್ಟರ್?: ಲಕ್ಷ್ಮೀ ಹೆಬ್ಬಾಳಕರ್ ಪ್ರಶ್ನೆ

ಬೆಳಗಾವಿ: ಕೋವಿಡ್ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆಗೆ ಅಲೋಟ್ ಆಗಿದ್ದ ಆಕ್ಸಿ ಜನ್ ನ್ನು ಹುಬ್ಬಳ್ಳಿ - ಧಾರವಾಡಕ್ಕೆ ತೆಗೆದುಕೊಂಡು ಹೋಗಿ ಇಲ್ಲಿಯ ಜನರಿಗೆ ಅನ್ಯಾಯ ಮಾಡಿರುವ ಜಗದೀಶ್ ಶೆಟ್ಟರ್ ಕೊಡುಗೆ ಏನಿದೆ ಬೆಳಗಾವಿ ಜಿಲ್ಲೆಗೆ? ಈಗ ಇಲ್ಲಿಗೆ ಬಂದು ಕರ್ಮ ಭೂಮಿ ಕರ್ಮ ಭೂಮಿ ಎನ್ನುತ್ತಿದ್ದಾರೆ. ನಾವೇನು ಹುಚ್ಚರಾ? ಬೆಳಗಾವಿ ಜಿಲ್ಲೆಯ ಜನರನ್ನು ಬಕ್ರಾ ಮಾಡಲು ಬಂದಿದ್ದೀರಾ? ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಖಾರವಾಗಿ ಪ್ರಶ್ನಿಸಿದ್ದಾರೆ.

ಗೋಕಾಕದಲ್ಲಿ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಅವರು ಉತ್ತರಿಸುತ್ತಿದ್ದರು. ಶೆಟ್ಟರ್ ಏನ್ ಮಾಡಿದ್ದಾರೆ ಬೆಳಗಾವಿಗೆ? ಬೆಳಗಾವಿ ದೊಡ್ಡ ಜಿಲ್ಲೆ, ಜನಸಂಖ್ಯೆ ಹೆಚ್ಚಿದೆ. ಕೊರೋನಾ ಸಂದರ್ಭದಲ್ಲಿ ಜಿಲ್ಲೆಗೆ ಆಕ್ಸಿಜನ್ ಅಲೋಟ್ ಮಾಡಿದ್ದನ್ನು ಹುಬ್ಬಳ್ಳಿ -ಧಾರವಾಡಕ್ಕೆ ತೆಗೆದುಕೊಂಡು ಹೋಗಿದ್ದಾರೆ. ಇದೇ ಕರ್ಮ ಭೂಮಿಯಾ? ಜಿಲ್ಲಾ ಉಸ್ತುವಾರಿ ಸಚಿವರಿದ್ದರಲ್ಲ, ಕರ್ಮ ಭೂಮಿ ಎನ್ನಲು ಏನ್ ಮಾಡಿದ್ದಾರೆ ಬೆಳಗಾವಿಗೆ? ಎಂದು ಪ್ರಶ್ನಿಸಿದರು.

6 ಬಾರಿ ಹುಬ್ಬಳ್ಳಿ ಜನರು ಅವರನ್ನು ಆಯ್ಕೆ ಮಾಡಿ ಕಳುಹಿಸಿದ್ದರು. ವಿರೋಧ ಪಕ್ಷದ ನಾಯಕರಾದರು, ಮಂತ್ರಿಯಾದರು, ಮುಖ್ಯಮಂತ್ರಿಯಾದರು, ಬಿಜೆಪಿ ಅಧ್ಯಕ್ಷರಾದರು. ಎಲ್ಲವನ್ನೂ ಅನುಭವಿಸಿದ್ದಂತವರನ್ನು ಹುಬ್ಬಳ್ಳಿ- ಧಾರವಾಡ ಜನರು ಹೊರಗೆಹಾಕಿದ್ದಾರೆ. ಈಗ ಇಲ್ಲಿಗೆ ಬಂದು ಕರ್ಮ ಭೂಮಿ ಕರ್ಮ ಭೂಮಿ ಎನ್ನಲು ಏನಿದೆ ಬೆಳಗಾವಿಗೆ ನಿಮ್ಮ ಕೊಡುಗೆ? ಏನಾದರೂ ಕೊಡುಗೆ ಇದೆಯಾ ನಾಚಿಕೆಯಾಗಬೇಕು ನಿಮಗೆ ಎಂದು ಹೆಬ್ಬಾಳಕರ್ ಕಿಡಿಕಾರಿದರು.



ಗೋ ಬ್ಯಾಕ್ ಶೆಟ್ಟರ್ ಎನ್ನುವುದು ಅವರ ಪಕ್ಷದ ಕಾರ್ಯಕರ್ತರೇ ಮಾಡುತ್ತಿರುವ ಅಭಿಯಾನ, ಅವರ ಪಕ್ಷದ ಕಾರ್ಯಕರ್ತರ ಸ್ವಾಭಿಮಾನಕ್ಕೂ ಧಕ್ಕೆಯಾಗಿದೆ. ಮೋದಿಯವರು ಎಲ್ಲೋ ಹೋಗಿ ಚುನಾವಣೆಗೆ ನಿಂತಿದ್ದಾರೆ ಎಂದು ತಮ್ಮ ಬೆಳಗಾವಿ ಸ್ಪರ್ಧೆಯನ್ನು ಸಮರ್ಥಿಸಿಕೊಳ್ಳುತ್ತಿದ್ದಾರೆ. ಇವರೇನು ಮೋದಿಯಷ್ಟು ದೊಡ್ಡವರಾ? ನಾಚಿಕೆಯಾಗಬೇಕು ಇವರಿಗೆ ಎಂದು ಜರಿದರು.

## ರಾಜ್ಯ ಬಿಜೆಪಿ ಮಾಧ್ಯಮ ಸಮಿತಿಯ ಸದಸ್ಯರಾಗಿ ಆಯ್ಕೆಯಾಗಿದ್ದ ಎಫ್.ಎಸ್. ಸಿದ್ದನಗೌಡರ ಅವರಿಗೆ ಆಯ್ಕೆ ಪತ್ರ ನೀಡಿ ಗೌರವ

ಬೆಳಗಾವಿ:ಇತ್ತಿಚ್ಚಿಗೆ ಬೆಂಗಳೂರಿನಲ್ಲಿ ಜರುಗಿದ ರಾಜ್ಯ ಬಿಜೆಪಿ ಮಾಧ್ಯಮ ಕಾರ್ಯಾಗಾರದಲ್ಲಿ ರಾಷ್ಟ್ರೀಯ ಬಿಜೆಪಿ ವಕ್ತಾರ ಶಹಝಾನ ಪೂನಾವಾಲೆ ಅವರು ರಾಜ್ಯಾಧ್ಯಕ್ಷ ಬಿ.ವಾಯ್.ವಿ-ಜಯೇಂದ್ರ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ, ರಾಜ್ಯ ಮುಖ್ಯ ವಕ್ತಾರ ಅಶ್ವಥ-ನಾರಾಯಣ, ರಾಜ್ಯ ಮಾಧ್ಯಮ ಸಂಚಾಲಕ ಕರುನಾಕರ ಖಾಸಲೆ, ಸಹ ಸಂಚಾಲಕ ಪ್ರಶಾಂತ ಕಡೆಂಜಿ, ರಾಜ್ಯ ಪ್ರಧಾನಕಾರ್ಯದರ್ಶಿಗಳಾದ ಪಿ.ರಾಜೀವ, ಪ್ರೀತಂಗೌಡ ನೇತೃತ್ವದಲ್ಲಿ ರಾಜ್ಯ ಬಿಜೆಪಿ ಮಾಧ್ಯಮ ಸಮಿತಿಯ ಸದಸ್ಯರಾಗಿ ಆಯ್ಕೆಯಾಗಿದ್ದ ಎಫ್. ಎಸ್. ಸಿದ್ದನಗೌಡರ ಅವರಿಗೆ ಆಯ್ಕೆ ಪತ್ರ ನೀಡಿ ಗೌರವಿಸಿದರು.



ಬಿಜೆಪಿ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಪಕ್ಷದಲ್ಲಿ ಎರಡು ದಶಕಗಳಿಂದ ಸೇವೆಸಲ್ಲಿಸುತ್ತಾ ಅನೇಕ ಹುದ್ದೆಗಳನ್ನು ನಿಭಾಯಿಸಿದ್ದ ಎಫ್-ಎಸ್.ಸಿದ್ದನಗೌಡರ ರಾಜ್ಯ ಬಿಜೆಪಿ ಮಾಧ್ಯಮ ಸದಸ್ಯರನ್ನಾಗಿ ಪಕ್ಷ ಆಯ್ಕೆ ಮಾಡಿತ್ತು.

ಜಿಲ್ಲಾ ಮಾಧ್ಯಮ ಸಂಚಲಕರಾಗಿ ನಾಲ್ಕು ವರ್ಷ ಪಕ್ಷದಲ್ಲಿ ಸಲ್ಲಿಸಿದ ಸೇವೆ ರಾಜ್ಯದಲ್ಲಿಯೆ ಅತ್ಯತ್ತಮವಾಗಿತ್ತು. ಬಿಜೆಪಿಯ ಪ್ರತಿಯೊಂದು ಕಾರ್ಯಕ್ರಮದಲ್ಲಿ ಸಕ್ರೀಯವಾಗಿ ತೊಡಗಿಕೊಂಡು ಪಕ್ಷದಲ್ಲಿ ಮಾಡಿದ ಸೇವಾಕಾರ್ಯಗಳನ್ನು ರಾಜ್ಯ ಬಿಜೆಪಿ ಪರಿಗಣಿಸಿ ರಾಜ್ಯ ಪದಾಧಿಕಾ-ರಿಯನ್ನಾಗಿ ಆಯ್ಕೆಮಾಡಿದ್ದು ಒಬ್ಬ ನಿಷ್ಠಾವಂತ ಕಾರ್ಯಕರ್ತನಿಗೆ ಸಂದ ಗೌರವವಾಗಿದೆ.

ರಾಜ್ಯದ ಪದಾಧಿಕಾರಿಗಳು ಪ್ರತಿ ಜಿಲ್ಲೆಯ ಮಾಧ್ಯಮ ವಕ್ತಾರರು ಸಂಚಾಲಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಸಿಎಂ ಸಿದ್ದು ವಿರುದ್ಧ ಸುಳ್ಳು ಸುದ್ದಿ ಪ್ರಕಟ ಆರೋಪ: ಅರ್ನಬ್ ಗೋಸ್ವಾಮಿ, ಆರ್. ಕನ್ನಡ ಸಂಪಾದಕನ ವಿರುದ್ಧ ಪ್ರಕರಣ ದಾಖಲು




ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಸುಳ್ಳು ಸುದ್ದಿ ಪ್ರಸಾರ ಮಾಡಿ ಸಾರ್ವಜನಿಕರನ್ನು ಪ್ರಚೋದಿಸಲು ಯತ್ನಿಸಿದ ಆರೋಪದಡಿ ರಿಪಬ್ಲಿಕ್ ಟಿವಿ ಮುಖ್ಯಸ್ಥ ಅರ್ನಬ್ ಗೋಸ್ವಾಮಿ ಮತ್ತು ಆರ್. ಕನ್ನಡ ಸಂಪಾದಕ ನಿರಂಜನ್ ವಿರುದ್ಧ ನಗರದ ಎಸ್.ಜೆ. ಪಾರ್ಕ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿರುವುದಾಗಿ ವರದಿಯಾಗಿದೆ.

ಆರ್.ಕನ್ನಡ ಸುದ್ದಿವಾಹಿನಿಯು ಮಾ.27ರಂದು ಸಂಜೆ 7:15ಕ್ಕೆ ಎಂ.ಜಿ.ರಸ್ತೆಯ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂಚರಿಸುವಾಗ ವಾಹನಗಳ ಸಂಚಾರ ತಡೆದು ಆಯಂಬುಲೆನ್ಸ್ ಸಂಚಾರಕ್ಕೆ ಅಡ್ಡಿಪಡಿಸಿದ್ದಾರೆ ಎಂದು ವ್ಯಕ್ತಿಯೊಬ್ಬರು ಮಾಡಿದ ವಿಡಿಯೋ ತುಣುಕೊಂದನ್ನು ಪ್ರಸಾರ ಮಾಡಿದೆ.

ಆದರೆ, ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನಲ್ಲಿದ್ದು, ಬೆಂಗಳೂರಿನ ಕಡೆಗೆ ಪ್ರಯಾಣ ಮಾಡಿರಲಿಲ್ಲ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಕಾನೂನು ವಿಭಾಗದ ಕಾರ್ಯದರ್ಶಿ ರವೀಂದ್ರ ಎಂ.ವಿ. ನೀಡಿರುವ ಪೊಲೀಸ್ ದೂರಿನಲ್ಲಿ ಸ್ಪಷ್ಟಪಡಿಸಿದ್ದಾರೆ.


ವಿಡಿಯೋ ತುಣುಕಿನ ಅಸಲಿಯತ್ತು ಪರಿಶೀಲಿಸದೆ ಚುನಾವಣೆಯ ಸಂದರ್ಭದಲ್ಲಿ ಸಾರ್ವಜನಿಕರನ್ನು ಪ್ರಚೋದಿಸುವ ಉದ್ದೇಶದಿಂದ ಆರ್. ಕನ್ನಡ ಚಾನೆಲ್ ನಲ್ಲಿ ತಪ್ಪು ಮಾಹಿತಿ ಪ್ರಸಾರ ಮಾಡಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಈ ದೂರಿನನ್ವಯ ಆರ್.ಕನ್ನಡ (ರಿಪಬ್ಲಿಕ್) ವಾಹಿನಿಯ ಮಾಲಕ ಅರ್ನಬ್ ಗೋಸ್ವಾಮಿ ಮತ್ತು ಸಂಪಾದಕ ನಿರಂಜನ್ ವಿರುದ್ಧ ಕಲಂ 505(2)ರಡಿ ಎಸ್.ಜೆ.ಪಾರ್ಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ನನ್ನ ಬಳಿ ಹಣವಿಲ್ಲ: ನಿರ್ಮಲಾ ಸೀತಾರಾಮನ್

ನವದೆಹಲಿ: ಲೋಕಸಭಾ ಚುನಾವಣೆಗೆ ಸ್ಪರ್ಧಿಸಲು ಅಗತ್ಯವಿರುವಷ್ಟು ಹಣ ನನ್ನ ಬಳಿ ಇಲ್ಲ. ಹೀಗಾಗಿ ಚುನಾವಣೆಯಲ್ಲಿ ಸ್ಪರ್ಧೆ ಮಾಡಲ್ಲ ಎಂದು ಹೈಕಮಾಂಡ್‌ಗೆ ತಿಳಿಸಿದ್ದೇನೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಅವರು ಆಂಧ್ರಪ್ರದೇಶ ಅಥವಾ ತಮಿಳುನಾಡಿನಿಂದ ಸ್ಪರ್ಧಿಸುವ ಆಯ್ಕೆಯನ್ನು ನೀಡಿದ್ದಾರೆ. ಚುನಾವಣೆಯಲ್ಲಿ ಸ್ಪರ್ಧಿಸಲು ನನ್ನ ಬಳಿಕ ಹಣವಿಲ್ಲ. ಆದ್ದರಿಂದ ಚುನಾವಣೆಯಲ್ಲಿ ಸ್ಪರ್ಧಿಸುವ ಬಿಜೆಪಿಯ ಪ್ರಸ್ತಾಪವನ್ನು ನಿರಾಕ-ರಿಸಿದ್ದೇನೆ ಎಂದು ತಿಳಿಸಿದ್ದಾರೆ.



ಒಂದು ವಾರ ಅಥವಾ ಹತ್ತು ದಿನಗಳ ಕಾಲ ಯೋಚಿಸಿದ ನಂತರ ಈ ನಿರ್ಧಾರ ತಿಳಿಸಿದ್ದೇನೆ. ಸ್ಪರ್ಧಿಸಲು ನನ್ನ ಬಳಿ ಅಷ್ಟು ಹಣವಿಲ್ಲ. ಅದು ಆಂಧ್ರಪ್ರದೇಶ ಅಥ-ವಾ ತಮಿಳುನಾಡೇ ಆಗಿರಲಿ. ನನಗೂ ಸಮಸ್ಯೆ ಇದೆ. ಇದು ಅವರು ಬಳಸುವ ಹಲವಾರು ಇತರ ಗೆಲುವಿನ ಮಾನದಂಡಗಳ ಪ್ರಶ್ನೆಯಾಗಲಿದೆ ಮಾತನಾಡಿದ್ದಾರೆ.

ಅವರು ನನ್ನ ನಿಲುವನ್ನು ಒಪ್ಪಿಕೊಂಡಿದ್ದಾರೆ ಎಂದು ನಾನು ತುಂಬಾ ಕೃತಜ್ಞಳಾಗಿದ್ದೇನೆ. ಹಾಗಾಗಿ ನಾನು ಸ್ಪರ್ಧಿಸುವುದಿಲ್ಲ ಎಂದು ಸಚಿವೆ ಸ್ಪಷ್ಟಪಡಿಸಿದ್ದಾರೆ. ಅಲ್ಲದೇ, ದೇಶದ ಹಣಕಾಸು ಸಚಿವರ ಬಳಿ ಚುನಾವಣೆಯಲ್ಲಿ ಹೋರಾಡಲು ಏಕೆ ಸಾಕಷ್ಟು ಹಣವಿಲ್ಲ ಎಂಬ ಪ್ರಶ್ನೆ ಕೇಳಿಬಂದಾಗ, ಭಾರತದ ಕನ್ಸಾಲಿಡೇಟೆಡ್ ಫಂಡ್ ತನಗೆ ಸೇರಿಲ್ಲ ಎಂದು ಪ್ರತಿಕ್ರಿಯಿಸಿದ್ದಾರೆ.

## ಕೋಟ್ಯಂತರ ರೂ. ಮೌಲ್ಯದ ಚಿನ್ನವನ್ನು ವಶಕ್ಕೆ ಪಡೆದ ಅಧಿಕಾರಿಗಳು

ಚಿತ್ರದುರ್ಗ: ಲೋಕ ಸಭಾ ಚುನಾವಣೆಯ ಹೊತ್ತಲ್ಲಿ ಅಕ್ರಮ ಸಾಗಾಟ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದೆ. ಚುನಾವಣಾ ಅಧಿಕಾ-ರಿಗಳು ಕಣ್ಣು ತಪ್ಪಿಸಿ ಸೀರೆ, ಹಣ, ಬೆಲೆಬಾಳುವ ವಸ್ತುಗಳ ಸಾಗಾಟ ನಡೆಯುತ್ತಿದೆ. ಇದೀಗ ಅಂತಹದ್ದೇ ಪ್ರಕರಣವೊಂದು ಮುನ್ನೆಲೆಗೆ ಬಂದಿದ್ದು, ಸುಮಾರು 5kg 250 gm ಚಿನ್ನವನ್ನ ಫ್ಲೈಯಿಂಗ್ ಸ್ಕ್ವಾಡ್ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಚಿತ್ರದುರ್ಗ ಜಿಲ್ಲೆಯ ಹಿರಿಯೂರು ಪಟ್ಟಣದ ವಿಜಯಾ ಬ್ಯಾಂಕ್ ಮುಂಭಾಗ ಈ ಘಟನೆ ಬೆಳಕಿಗೆ ಬಂದಿದೆ. ಹಿರಿಯೂರು ಬಪಟ್ಟಣದಲ್ಲಿ ಫ್ಲೈಯಿಂಗ್ ಸ್ಕ್ವಾಡ್ ಅಧಿಕಾರಿಗಳ ಭರ್ಜರಿ ಕಾರ್ಯಾಚರಣೆ ನಡೆಸಿದ್ದಾರೆ. ದಾಖಲೆಯಿಲ್ಲದೇ ಸಾಗಿಸುತ್ತಿದ್ದ ಚಿನ್ನವನ್ನ ವಶಕ್ಕೆ ಪಡೆದುಕೊಂಡಿದ್ದಾರೆ. ಸುಮಾರು 3ಕೋಟಿ, 55 ಲಕ್ಷ ಮೌಲ್ಯದ ಚಿನ್ನಾಭರಣವನ್ನು ವಶಪಡಿಸಿಕೊಂಡಿದ್ದಾರೆ. ಕೋಟ್ಯಂತರ ರೂಪಾಯಿ ಮೌಲ್ಯದ ಚಿನ್ನವನ್ನು ಎಫ್ಎಸ್ಟಿ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ವ್ಯಕ್ತಿಯನ್ನು ಪರಿಶೀಲಿಸಿದಾಗ ಆತನ ಬಳಿ 5kg,250 gm ಚಿನ್ನ ಪತ್ತೆಯಾಗಿದೆ. ಇದು ದಾವಣಗೆರೆಯ ಮೂಲದ ಜ್ಯುವೆಲರಿ ಶಾಪ್ ಗೆ ಸೇರಿದ್ದು ಎನ್ನಲಾಗಿದೆ.

## ಕೋಲಾರ ಶಾಸಕರ ಮುನಿಸು ಶಮನಕ್ಕೆ ಸಿಎಂ ಸಿದ್ದರಾಮಯ್ಯ ಎಂಟ್ರಿ

ಬೆಂಗಳೂರು: ಸಚಿವ ಕೆ.ಹೆಚ್ ಮುನಿಯಪ್ಪ ಅಳಿಯನಿಗೆ ಟಿಕೆಟ್ ವಿರೋಧಿಸಿ ಕೋಲಾರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಶಾಸಕರು, ಎಂ-ಎಲ್ಸಿಗಳ ರಾಜೀನಾಮೆಯ ಹೈಡ್ರಾಮಾವೇ ನಡೆದುಗೋಗಿದೆ.

ಟಿಕೆಟ್ ಘೋಷಣೆಗೂ ಮುನ್ನವೇ ಕೋಲಾರ ಕಾಂಗ್ರೆಸ್ನಲ್ಲಿ ಬಣ ಬಡಿದಾಟ ಸ್ಫೋಟಗೊಂಡಿದೆ. ಕೋಲಾರ ಕಾಂಗ್ರೆಸ್ನಲ್ಲಿನ ಬಿರುಕು ಮತ್ತೆ ಜಗಜಾಹೀರಾಗಿದ್ದು, ಸದ್ಯ ಕೋಲಾರ ಟಿಕೆಟ್ ಘೋಷಣೆಯನ್ನು ಹೈಕಮಾಂಡ್ ತಡೆ ಹಿಡಿದಿದೆ. ಇದೀಗ ಅಸಮಾಧಾನ ಶಮನಕ್ಕೆ ಖುದ್ದು ಸಿಎಂ ಸಿದ್ದರಾಮಯ್ಯರೇ ಮುಂದಾಗಿದ್ದಾರೆ.

ಸಚಿವ ಮುನಿಯಪ್ಪ ಮತ್ತು ರಮೇಶ್ ಕುಮಾರ್ ಬಣಗಳ ನಡುವಿನ ತಿಕ್ಕಾಟವೇ ಟಿಕೆಟ್ ಕಲಹಕ್ಕೆ ಕಾರಣವಾಗಿದೆ. ಸಚಿವ ಮುನಿಯಪ್ಪ, ಕೋಲಾರದಲ್ಲಿ ಅಳಿಯ ಚಿಕ್ಕಪೆದ್ದಣ್ಣಗೆ ಟಿಕೆಟ್ ನೀಡುವಂತೆ ಪಟ್ಟು ಹಿಡಿದಿದ್ದಾರೆ. ಯಾವುದೇ ಕಾರಣ-ಕ್ಕೂ ಟಿಕೆಟ್ ಕೊಡಬಾರದು ಎಂದು ರಮೇಶ್ ಕುಮಾರ ಬಣ ತೀವ್ರ ವಿರೋಧ ವ್ಯಕ್ತಪಡಿಸುತ್ತಿದೆ. ಶಾಸಕರ ಮುನಿಸು ಶಮನಕ್ಕೆ ಸಿಎಂ ಸಿದ್ದರಾಮಯ್ಯ ಸಂಜೆ 4 ಗಂಟೆಯ ಹೊತ್ತಿಗೆ ಸಭೆ ಕರೆದಿದ್ದಾರೆ. ಸಭೆಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್, ಕೋಲಾರ ಶಾಸಕರು ಭಾಗಿಯಾಗುತ್ತಿದ್ದಾರೆ.

ಕೋಲಾರ ನಾಯಕರ ಜೊತೆ ಚರ್ಚೆ ಮಾಡುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಇನ್ನು ಡಿಸಿಎಂ ಡಿಕೆ ಶಿವಕುಮಾರ್ ಮಾತನಾಡಿ, ಕೋಲಾರ ಟಿಕೆಟ್ ವಿಚಾರದಲ್ಲಿ ಸಂಜೆಯೊಳಗೆ ತೀರ್ಮಾನ ಆಗುತ್ತದೆ. ಯಾರೂ ರಾಜೀನಾಮೆ ಕೊಡುವುದಿಲ್ಲ ಅಂದಿದ್ದಾರೆ.



ಕೋಲಾರ ಕಾಂಗ್ರೆಸ್ ಟಿಕೆಟ್ ವಿಚಾರದಲ್ಲಿ ರಾಜ್ಯ ನಾಯಕರು, ಹೈಕಮಾಂಡ್ ಮಧ್ಯೆ ಸಂಘರ್ಷ ಏರ್ಪಟ್ಟಿದೆ. ಸಚಿವ ಮುನಿಯಪ್ಪರನ್ನ ಮಾತ್ರ ಖರ್ಗೆ ಚರ್ಚೆಗೆ ಆಹ್ವಾನಿಸಿದ್ದಕ್ಕೆ ಆಕ್ರೋಶ ವ್ಯಕ್ತವಾಗಿದೆ.

ಕೋಲಾರ ಮುನಿಸಿಗೆ ಕಾರಣವೇನು?: ಟಿಕೆಟ್ ವಿಚಾರದಲ್ಲಿ ಮುನಿಯಪ್ಪರನ್ನು ಮಾತ್ರ ಚರ್ಚೆಗೆ ಪರಿಗಣಿಸಿದ್ದ ಖರ್ಗೆ, ಮುನಿಯಪ್ಪ ಜೊತೆ ಮಾತ್ರ ಪ್ರತ್ಯೇಕ ಮಾತುಕತೆ ನಡೆಸಿದ್ದಾರೆ. ಬೇರೆ ನಾಯಕರ ಅಭಿಪ್ರಾಯದ ಬಗ್ಗೆ ಖರ್ಗೆ ಚರ್ಚಿಸಿರಲಿಲ್ಲ. ಕೋಲಾರ ಸ್ಥಳೀಯ ನಾಯಕರ ಅಭಿಪ್ರಾಯ ಪಡೆದಿರಲಿಲ್ಲ. ವಿಧಾನಸಭೆಗೆ ದೇವನಹಳ್ಳಿಯಿಂದ ಮುನಿಯಪ್ಪ ಆಯ್ಕೆ ಆಗಿದ್ದಾರೆ. ಇದರಿಂದ ಮುನಿಯಪ್ಪರನ್ನು ಕೋಲಾರದಿಂದ ಹೊರಗಿಡಲು ಶಾಸಕರ ತಂತ್ರ ಆಗಿದೆ. ಮುನಿಯಪ್ಪ-ರಿಂದ ಉಳಿಗಾಲ ಎಂದುಕೊಂಡಿರೋ ಶಾಸಕರು, ಶಾಸಕರು ಪಕ್ಷ ಸೇರ್ಪಡೆಗೂ ವಿರೋಧಿಸಿದ್ದ ಮುನಿಯಪ್ಪ, ಕೊತ್ತೂರು ಮಂಜುನಾಥ್, ಎಂಸಿ ಸುಧಾಕರ್ ಸೇರ್ಪಡೆಗೆ ಅಡ್ಡಗಾಲು ಹಾಕಿದ್ದರು. ವಿರೋಧಿ ಬಣ ಸೃಷ್ಟಿ ಆಗುತ್ತೆಂದು ಅಡ್ಡಗಾಲು ಹಾಕಿದ್ದ ಮುನಿಯಪ್ಪ, ಇದಿರಂದ ರಾಜಕೀಯ ಭವಿಷ್ಯಕ್ಕೆ ಕಂಟಕ ಎಂದು ಶಾಸಕರು ಭಾವಿಸಿದ್ದಾರೆ. ಒಟ್ಟಾರೆಯಾಗಿ ಕೋಲಾರ ಕಾಂಗ್ರೆಸ್ ಟಿಕೆಟ್ನಲ್ಲಿ ಬಣ ಬಡಿದಾಟ ನಡೆಯುತ್ತಿದೆ. ಮನವೊಲಿಸಲು ಸಿಎಂ ಸಿದ್ದರಾಮಯ್ಯರೇ ಖುದ್ದು ಎಂಟ್ರಿಯಾಗಿದ್ದಾರೆ.

# ಮಂಗಳೂರು: ಬೈಕಂಪಾಡಿ ಕೈಗಾರಿಕಾ ಪ್ರದೇಶದಲ್ಲಿ ಭಾರಿ ಅಗ್ನಿ ಅನಾಹುತ!

ದಕ್ಷಿಣ ಕನ್ನಡ: ಮಂಗಳೂರು ಹೊರವಲಯದ ಬೈಕಂಪಾಡಿ ಕೈಗಾರಿಕಾ ಪ್ರದೇಶದಲ್ಲಿ ಗುರುವಾರ ಬೆಳಗ್ಗೆ ಭಾರಿ ಅಗ್ನಿ ಅನಾಹುತ ಸಂಭವಿಸಿದ್ದು, ಕಾರ್ಖಾನೆಯೊಂದು ಅಗ್ನಿಗಾಹುತಿಯಾಗಿದೆ.

ಕೋಳಿ ಆಹಾರಕ್ಕೆ ಬೇಕಾಗಿರುವ ಮೀನು ಪದಾರ್ಥಗಳನ್ನು ಉತ್ಪಾದಿಸುವ ಶಿಹಾರ ಎಂಟರ್ಪ್ರೈಸ್ ನಲ್ಲಿ ಈ ಅಗ್ನಿ ದುರಂತ ಸಂಭವಿಸಿದ್ದು, ತಡ ರಾತ್ರಿ ಗೋದಾಮಿನಲ್ಲಿ ಕಾಣಿಸಿಕೊಂಡ ಬೆಂಕಿ ಬಳಿಕ ಕಾರ್ಖಾನೆ ಇಡೀಯ ವ್ಯಾಪಿಸಿದ್ದು ಮಾಹಿತಿ ಪಡೆದ ಅಗ್ನಿ ಶಾಮಕ ದಳ ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ನಂದಿಸಿ ಪರಿಸ್ಥಿತಿಯನ್ನು ಹತೋಟಿಗೆ ತಂದಿದ್ದಾರೆ.

**ಬೆಂಕಿ ನಂದಿಸಲು ಅಗ್ನಿಶಾಮಕ ದಳ ಹರಸಾಹಸ**

ಅಗ್ನಿ ಅನಾಹುತ ವಿಚಾರ ತಿಳಿದ ಕೂಡಲೇ ಸ್ಥಳಕ್ಕೆ ಆಗಮಿಸಿದ ಎಂಆರ್ ಪಿಎಲ್, ಎನ್ ಎಂಪಿಟಿನಿಂದ ಸುಮಾರು 8 ಅಗ್ನಿಶಾಮಕ ವಾಹನಗಳು ಬೆಂಕಿ ನಂದಿಸಲು ಹರಸಾಹಸ ಪಟ್ಟವು.



ನಿರಂತರ ಮೂರೂವರೆ ಗಂಟೆಗಳ ಕಾರ್ಯಾಚರಣೆಯ ಬಳಿಕ ಬೆಂಕಿ ನಿಯಂತ್ರಣಕ್ಕೆ ಬಂದಿದೆ. ಆದರೆ ಅಷ್ಟರಲ್ಲಿ ಫ್ಯಾಕ್ಟರಿ ಸಂಪೂರ್ಣ ಬೆಂಕಿಗೆ ಆಹುತಿಯಾಗಿದೆ.

ಘಟನೆಯಲ್ಲಿ ಯಾವುದೇ ಸಾವು ನೋವುಗಳು ಸಂಭವಿಸಿಲ್ಲ. ಶಾರ್ಟ್ ಸರ್ಕಿಟ್ ದುರಂತಕ್ಕೆ ಕಾರಣವೆಂದು ಶಂಕಿಸಲಾಗಿದ್ದು ಕೋಟ್ಯಾಂತರ ರೂಪಾಯಿಗಳ ನಷ್ಟ ಸಂಭವಸಿದೆ ಎಂದು ಮಾಲಿಕ ಮೊಹಮ್ಮದ್ ತಿಳಿಸಿದ್ದಾರೆ. ಕಾರ್ಖಾನೆಯು 'ಶಿಹಾರ್ ಎಂಟರ್‌ಪ್ರೈಸಸ್' ಕಂಪನಿಯ ಒಡೆತನದಲ್ಲಿದೆ ಎನ್ನಲಾಗಿದೆ.

ಬೆಂಕಿ ಹೊತ್ತಿಕೊಳ್ಳಲು ಕಾರಣದ ಕುರಿತು ಇನ್ನೂ ತನಿಖೆ ಮಾಡಲಾಗುತ್ತಿದ್ದು, ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡಿರಬಹುದು ಎಂದು ಶಂಕಿಸಲಾಗಿದೆ ಎಂದು ಅಗ್ನಿಶಾಮಕ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

# ಅರಣ್ಯ ಭೂಮಿ ಸಾಗುವಳಿದಾರರಿಗೆ ಹಕ್ಕುಪತ್ರ ಕೊಡಿಸದ ಬಿಜೆಪಿ: ಮಧು ಬಂಗಾರಪ್ಪ ಆರೋಪ

ಸಾಗರ: 'ಕಳೆದ 15 ವರ್ಷಗಳಿಂದ ಶಿವಮೊಗ್ಗ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಸದಸ್ಯರೇ ಆಯ್ಕೆಯಾಗಿದ್ದರೂ ಅರಣ್ಯ ಭೂಮಿ ಸಾಗುವಳಿದಾರರಿಗೆ ಹಕ್ಕುಪತ್ರ ಕೊಡಿಸಲು ಯಾವುದೆ ಆಸಕ್ತಿ ತೋರಲಿಲ್ಲ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ಆರೋಪಿಸಿದರು. ಇಲ್ಲಿನ ಈಡಿಗರ ಸಮುದಾಯ ಭವನದಲ್ಲಿ ಸೋಮವಾರ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿದರು.

'ಭೂರಹಿತ ಬಡವರಿಗೆ ಭೂಮಿಯ ಹಕ್ಕು ಕೊಡಿಸಿದ್ದು ಕಾಂಗ್ರೆಸ್ ಪಕ್ಷವೆ ಹೊರತು ಬಿಜೆಪಿಯಲ್ಲ. ಭೂರಹಿತರ ಪರವಾಗಿ ಧ್ವನಿ ಎತ್ತಬೇಕಿದ್ದ ಬಿಜೆಪಿಯ ಮುಖಂಡರು ಮೌನವಾಗಿರುವುದು ಬಿಜೆಪಿಯ ಬಡವರ ವಿರೋಧಿ ನೀತಿಗೆ ಸಾಕ್ಷಿಯಾಗಿದೆ' ಎಂದು ಟೀಕಿಸಿದರು.

'ಕಾಂಗ್ರೆಸ್ ನ ಪ್ರತಿಯೊಬ್ಬ ಕಾರ್ಯಕರ್ತರು ಲೋಕಸಭೆ ಚುನಾವಣೆಯಲ್ಲಿ 'ನನ್ನ ಬೂತ್, ನನ್ನ ಜವಾಬ್ದಾರಿ' ಎಂಬ ಘೋಷಣೆಯಡಿ ಅವರ ವ್ಯಾಪ್ತಿಯ ಬೂತ್ ನಲ್ಲಿ ಲೀಡ್ ಬರುವಂತೆ ನೋಡಿಕೊಳ್ಳಬೇಕು. ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ನುಡಿದಂತೆ 5 ಗ್ಯಾರೆಂಟಿಗಳನ್ನು ನೀಡಿರುವುದರಿಂದ



ಮತದಾರರ ಮುಂದೆ ಹೋಗುವ ನೈತಿಕ ಶಕ್ತಿ ನಮ್ಮೆಲ್ಲರಿಗೂ ಇದೆ' ಎಂದರು.

ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜಕುಮಾರ್, 'ಶಿವಮೊಗ್ಗ ಜಿಲ್ಲೆಯ ಮಗಳಾಗಿರುವ ಕಾರಣ–ಕ್ಕೆ ನನಗೆ ಮತ ಕೇಳುವ ಹಕ್ಕು ಇದೆ. ನನ್ನ ತಂದೆ ಎಸ್.ಬಂಗಾರಪ್ಪ ಅವರು ಈ ಹಿಂದೆ ಮುಖ್ಯಮಂತ್ರಿಯಾಗಿದ್ದಾಗ ಜಾರಿಗೆ ತಂದಿದ್ದ ಹಲವು ಜನಪರ ಯೋಜನೆಗಳು ನನ್ನ ಕೈಹಿಡಿಯವು ವಿಶ್ವಾಸವಿದೆ. ಲೋಕಸಭೆಯಲ್ಲಿ ಮಹಿಳೆಯರು ಸೇರಿದಂತೆ ಎಲ್ಲಾ ವರ್ಗದ ಜನರ ಧ್ವನಿಯಾಗುತ್ತೇನೆ' ಎಂದರು.

ಚಿತ್ರನಟ ಶಿವರಾಜಕುಮಾರ್, 'ನನ್ನ ತಂದೆ ರಾಜ್ ಕುಮಾರ್, ಮಾವ ಎಸ್.ಬಂಗಾರಪ್ಪ ಈ ಎರಡೂ ಕುಟುಂಬದವರು ಸಾಮಾಜಿಕ ಕಾಳಜಿಯನ್ನು ತೋರುತ್ತಲೆ ಬಂದಿದ್ದಾರೆ. ಈ ಎರಡೂ ಕುಟುಂಬಗಳಿಂದ ಸಾಮಾಜಿಕ ಕಳಕಳಿ ಹೇಗಿರಬೇಕು ಎಂಬುದನ್ನು ಅಭ್ಯರ್ಥಿ ಗೀತಾ ಕಲಿತಿದ್ದಾರೆ. ಶಿವಮೊಗ್ಗ ಕ್ಷೇತ್ರದಲ್ಲಿ ಅವರ ಪರವಾಗಿ ಅತ್ಯುತ್ತಮ ವಾತಾವರಣ ನಿರ್ಮಾಣವಾಗಿದ್ದು ಜನರ ನಂಬಿಕೆ ಉಳಿಸಿಕೊಳ್ಳುವ ರೀತಿಯಲ್ಲಿ ನಡೆದುಕೊಳ್ಳುತ್ತಾರೆ' ಎಂದು ಹೇಳಿದರು.

ಮಾಜಿ ಸಂಸದ ಆಯನೂರು ಮಂಜುನಾಥ್, 'ಬಿಜೆಪಿ ಅಭ್ಯರ್ಥಿ ಬಿ.ವೈ.ರಾಘವೇಂದ್ರ ಭಾರೀ ಅಭಿವೃದ್ಧಿ ಮಾಡಿರುವುದಾಗಿ ಪ್ರಚಾರ ಮಾಡುತ್ತಿದ್ದಾರೆ. ವಾಸ್ತವದಲ್ಲಿ ಆಗಿರುವುದು ಯಡಿಯೂರಪ್ಪ ಹಾಗೂ ಈಶ್ವರಪ್ಪ ಕುಟುಂಬದ ಅಭಿವೃದ್ಧಿಯೆ ಹೊರತು ಶಿವಮೊಗ್ಗದ್ದಲ್ಲ. ಶಿವಮೊಗ್ಗದಲ್ಲಿ ನಿರ್ಮಿಸಿರುವ ಎಲ್ಲಾ ಮೇಲ್ಸೆತುವೆಗಳು ಯಡಿಯೂರಪ್ಪ ಹಾಗೂ ಈಶ್ವರಪ್ಪ ಕುಟುಂಬದ ಆಸ್ತಿಗಳಿಗೆ ಸಹಾಯ ಮಾಡುವ ಸ್ಥಳದಲ್ಲೆ ಇವೆ' ಎಂದು ತಿಳಿಸಿದರು.

'ಚಿತ್ರನಟ ಶಿವರಾಜಕುಮಾರ್ ಮುಖಕ್ಕೆ ಬಣ್ಣ ಹಚ್ಚಿದರೆ ಕೆ.ಎಸ್.ಈಶ್ವರಪ್ಪ ನಾಲಿಗೆಗೆ ಬಣ್ಣ ಹಚ್ಚುವವರಾಗಿದ್ದಾರೆ. ಅವರ ಬಂಡಾಯ ರಾಜಕೀಯ ನಾಟಕವಾಗಿದ್ದು ತಮ್ಮ ಸ್ಪರ್ಧೆಯ ಮೂಲಕ ಹಿಂದುಳಿದವರ ಮತ ಪಡೆದು ಬಿಜೆಪಿಗೆ ಅನುಕೂಲ ಮಾಡಿಕೊಡಲು ಅವರು ಹುನ್ನಾರ ನಡೆಸಿದ್ದಾರೆ. ಈ ತಂತ್ರಗಾರಿಕೆಯನ್ನು ಹಿಂದುಳಿದ, ದಲಿತ, ಅಲ್ಪಸಂಖ್ಯಾತ ಸಮುದಾಯಗಳು ಅರ್ಥ ಮಾಡಿಕೊಳ್ಳಬೇಕು' ಎಂದರು. ಶಾಸಕ ಗೋಪಾಲಕೃಷ್ಣ ಬೇಳೂರು, 'ಸಾಗರದಲ್ಲಿ ಈಡಿಗರ ಸಮಾವೇಶದ ಹೆಸರಿನಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ರೂ. 3 ಕೋಟಿ ಹಣ ಖರ್ಚು ಮಾಡಿ ಸನ್ಮಾನಿಸಲಾಗಿದೆ. ಆದರೆ ಈ ಸಮಾವೇಶಕ್ಕೆ ಬಿಜೆಪಿ ಮುಖಂಡರನ್ನು ಹೊರತುಪಡಿಸಿ ಬೇರೆಯವರನ್ನು ಕರೆದಿಲ್ಲ. ಹಿರಿಯ ಮುಖಂಡ ಕಾಗೋಡು ತಿಮ್ಮಪ್ಪ ಅವರನ್ನು ಸಮಾವೇಶಕ್ಕೆ ಕಡೆಗಣಿಸಿದ್ದು ಯಾಕೆ' ಎಂದು ಪ್ರಶ್ನಿಸಿದರು. ಮಾಜಿ ಸಚಿವ ಕಾಗೋಡು ತಿಮ್ಮಪ್ಪ ಸಭೆಯನ್ನು ಉದ್ಘಾಟಿಸಿದರು ಸುಮಂಗಲಾ ರಾಮಕೃಷ್ಣ, ಎನ್.ಉಷಾ, ರವಿಕುಮಾರ ಗೌಡ, ಅಶೋಕ್ ಬೇಳೂರು ಇದ್ದರು.



## ಲೋಕಸಭಾ ಚುನಾವಣೆ: ಹಾಸನ ಜೆಡಿಎಸ್ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಆಸ್ತಿ ಮೌಲ್ಯ ನಾಲ್ಕು ಪಟ್ಟು ಹೆಚ್ಚಳ!

ಬೆಂಗಳೂರು: ಹಾಸನ ಲೋಕಸಭಾ ಕ್ಷೇತ್ರದಿಂದ ಮರು ಸ್ಪರ್ಧಿಸುತ್ತಿರುವ ರಾಜ್ಯದ ಏಕೈಕ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರು 40.85 ಕೋಟಿ ರೂಪಾಯಿ ಮೌಲ್ಯದ ಆಸ್ತಿಯನ್ನು ಘೋಷಿಸಿದ್ದಾರೆ. ಇದು 2019ರ ಚುನಾವಣಾ ಅಫಿಡವಿಟ್ ಗೆ ಹೋಲಿಸಿದರೆ ನಾಲ್ಕು ಪಟ್ಟು ಹೆಚ್ಚಳವಾಗಿದೆ. ಠೇವಣಿ, ಹೂಡಿಕೆ, ಇತರರಿಗೆ ನೀಡಿದ ಸಾಲ ಮತ್ತು ಆಭರಣ ಸೇರಿದಂತೆ ಒಟ್ಟು 5.45 ಕೋಟಿ ಮೌಲ್ಯದ ಚರ ಮತ್ತು 35.84 ಕೋಟಿ ಮೌಲ್ಯದ ಸ್ಥಿರಾಸ್ತಿಯನ್ನೂ ಹೊಂದಿರುವುದಾಗಿ 34 ವರ್ಷದ ಹಾಲಿ ಸಂಸದರು ಘೋಷಿಸಿದ್ದಾರೆ.

2019 ರ ಸಾರ್ವತ್ರಿಕ ಚುನಾವಣೆಯಲ್ಲಿ ಅವರು ತಮ್ಮ ಒಟ್ಟು ಆಸ್ತಿ ಮೌಲ್ಯ 9.78 ಕೋಟಿ ರೂಪಾಯಿ ಎಂದು ಘೋಷಿಸಿದ್ದರು. ಮಾಜಿ ಪ್ರಧಾನಿ ದೇವೇಗೌಡರ ಮೊಮ್ಮಗನಾಗಿರುವ ಪ್ರಜ್ವಲ್ ಅವರು 4.49 ಕೋಟಿ ರೂ. ಬಾಧ್ಯತೆ ( ಟುಚಿಭುಟುಣಥಿ) ಹೊಂದಿದ್ದು, ಸರ್ಕಾರದ ಬಾಕಿ 3.04 ಕೋಟಿ ರೂ. ಇರುವುದಾಗಿ ತಿಳಿಸಿದ್ದಾರೆ.

ಪ್ರಜ್ವಲ್ 2019ರ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಯ ಎ ಮಂಜು ಅವರನ್ನು 1.40 ಲಕ್ಷ ಮತಗಳ ಅಂತರದಿಂದ ಸೋಲಿಸಿದ್ದರು. ಈ ಬಾರಿ ಮಾಜಿ ಸಚಿವ ದಿವಂಗತ ಜಿ ಪುಟ್ಟಸ್ವಾಮಿಗೌಡ ಅವರ ಮೊಮ್ಮಗ 31ರ ಹರೆಯದ ಶ್ರೇಯಸ್ ಎಂ ಪಟೇಲ್ ಅವರನ್ನು ಕಾಂಗ್ರೆಸ್ ಕಣಕ್ಕಿಳಿಸಿದೆ.

# ಭಾರತದಲ್ಲಿ ಮುಸ್ಲಿಂ ಸಮುದಾಯ ಸುರಕ್ಷಿತ: ಆರಗ

ತೀರ್ಥಹಳ್ಳಿ: ಕಾಂಗ್ರೆಸ್ ಜಾತಿಗಳನ್ನು ಒಡೆದು ಅಂಥ ದರ್ಬಾರ್ ನಡೆಸುತ್ತಿದೆ. ನರೇಂದ್ರ ಮೋದಿ ಅವರು ಮುಸ್ಲಿಮರನ್ನು ಬಿಟ್ಟು ಯಾವುದೇ ಕಾರ್ಯಕ್ರಮ ರೂಪಿಸಿಲ್ಲ. ಭಾರತದಲ್ಲಿ ಮುಸ್ಲಿಂ ಸಮುದಾಯ ಸುರಕ್ಷಿತವಾಗಿದೆ ಎಂದು ಶಾಸಕ ಆರಗ ಜ್ಞಾನೇಂದ್ರ ತಿಳಿಸಿದರು. ಇಲ್ಲಿನ ಬಿಜೆಪಿ ಚುನಾವಣಾ ಕಚೇರಿಯಲ್ಲಿ ಗುರುವಾರ ನಡೆದ ಜೆಡಿಎಸ್–ಬಿಜೆಪಿ ಜಂಟಿ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಕೋಮುವಾದಿ ಶಕ್ತಿಗಳು ಬಾಂಬ್ ಸಿಡಿಸಿ ಖುಷಿ ಪಡುವುದನ್ನು ಸಹಿಸಲು ಸಾಧ್ಯವಿಲ್ಲ. ಜೆಡಿಎಸ್ ಮೈತ್ರಿಯಿಂದ ಬಿಜೆಪಿಗೆ ಶಕ್ತಿ ಬಂದಿದೆ. ಬೂತ್ ಮಟ್ಟದಿಂದಲೂ ಕಾರ್ಯಕರ್ತರ ನಡುವೆ ಸಮನ್ವಯತೆ ಕಾಯ್ದುಕೊಳ್ಳಲಾಗಿದೆ



ಎಂದು ನುಡಿದರು.

ರಾಜ್ಯದ ಎಲ್ಲಾ 28 ಕ್ಷೇತ್ರಗಳಲ್ಲಿ ಬಿಜೆಪಿ ಗೆಲ್ಲಲಿದೆ. ನರೇಂದ್ರ ಮೋದಿ ಶೇ 20ರಷ್ಟು ಬಡವರನ್ನು ಬಡತನ ರೇಖೆಯಿಂದ ಮೇಲಕ್ಕೆತ್ತಿದ್ದಾರೆ. ಆರ್ಥಿಕ ಚೈತನ್ಯದಿಂದ ಬಡವರ ಕೊಳ್ಳುವ ಸಾಮರ್ಥ್ಯ ವೃದ್ಧಿಸಿದೆ ಎಂದರು.

ಪ್ರಧಾನಿ ಮೋದಿ ಸರ್ಕಾರದ ಅಭಿವೃದ್ಧಿ ಕೆಲಸಗಳನ್ನು ಜನ ಬೆಂಬಲಿಸುತ್ತಾರೆ. ಕಾಂಗ್ರೆಸ್ ಆಡಳಿತಕ್ಕೆ ವಾರಂಟಿ ಇಲ್ಲ ಎಂದು ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ ಕುಣಜೆ ಕಿರಣ್ ಪ್ರಭಾಕರ್ ಹೇಳಿದರು.

ಶಿವಮೊಗ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ವೀಕ್ಷಕ ಮಾಜಿ ಶಾಸಕ ರಘುಪತಿ ಭಟ್, ತಾಲ್ಲೂಕು ಬಿಜೆಪಿ ಅಧ್ಯಕ್ಷ ನವೀನ್ ಹೆದ್ದೂರು, ಮಹಿಳಾ ಘಟಕದ ಅಧ್ಯಕ್ಷೆ ಶೈಲಾ ನಾಗರಾಜ್, ಎಸ್‌ಸಿ–ಎಸ್ಟಿ ಘಟಕದ ಅಧ್ಯಕ್ಷ ಆನಂದ ಇದ್ದರು. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಯಡೂರು ರಾಜಾರಾಂ ಗೈರಾಗಿದ್ದರು.

## ಚುನಾವಣೆ ಬಹಿಷ್ಕರಿಸುವುದಾಗಿ ಗದಗ ಜಿಲ್ಲೆಯ ಗ್ರಾಮಸ್ಥರ ಬೆದರಿಕೆ

ಗದಗ: ಜನಪ್ರತಿನಿಧಿಗಳು ತಮ್ಮ ಊರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಟ್ಟಿಲ್ಲ, ಇದುವರೆಗೆ ಯಾವ ಪಕ್ಷದವರು ಏನೂ ಕೆಲಸ ಮಾಡಿಲ್ಲ ಎಂದು ಮುಂಬರುವ ಲೋಕಸಭೆ ಚುನಾವಣೆಯನ್ನು ಗದಗ ಜಿಲ್ಲೆಯ ತಿಮ್ಮಾಪುರ ಗ್ರಾಮಸ್ಥರು ಮತ್ತು ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ ಸದಸ್ಯರು ಸಾಮೂಹಿಕವಾಗಿ ಬಹಿಷ್ಕರಿಸಲು ನಿರ್ಧರಿಸಿದ್ದಾರೆ. ಗದಗ ಜಿಲ್ಲೆಯ ತಿಮ್ಮಾಪುರ ಹಾಗೂ ಸುತ್ತಮುತ್ತಲ ಗ್ರಾಮಗಳಲ್ಲಿ ವಿವಿಧ ಸಂಘಟನೆಗಳ ಸಹಯೋಗದೊಂದಿಗೆ ನೂರಾರು ಗ್ರಾಮಸ್ಥರು ಗ್ರಾಮದ ಹೊಸ ಬಸ್ ನಿಲ್ದಾಣದಲ್ಲಿ ಸಮಾವೇಶಗೊಂಡು, ಬಂಡಿಗಳೊಂದಿಗೆ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಿದರು. ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗದಗ ಡಿಸಿ ತುರ್ತು ಮಧ್ಯಸ್ಥಿಕೆ ವಹಿಸಿ ಗ್ರಾಮಕ್ಕೆ ಆಗುತ್ತಿರುವ ಸಮಸ್ಯೆಗಳನ್ನು ಬಗೆಹರಿಸಬೇಕು ಎಂಬುದು ಅವರ ಬೇಡಿಕೆಯಾಗಿದೆ. ಪ್ರಾಥಮಿಕ ಆರೋಗ್ಯ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಗ್ರಾಮಸ್ಥರು ದೂರಿದ್ದಾರೆ.

## 'ಎನ್ ಕೌಂಟರ್ ಮಾಡುವುದಾಗಿ ಬೆದರಿಕೆ ಪತ್ರ,: ಪ್ರಿಯಾಂಕ್ ಖರ್ಗೆ

ಕಲಬುರಗಿ: ಭಾರತೀಯ ಜನತಾ ಪಾರ್ಟಿಯವರು ಗಲಭೆ ಸೃಷ್ಟಿ ಮಾಡಿ ಚುನಾವಣೆ ಮಾಡಬೇಕು ಅಂತಿದ್ದಾರೆ. ನನ್ನ ಹೆಣ ಬೀಳಿಸಿಂುಾದರೂ ಚುನಾವಣೆ ಗೆಲ್ಲುವ ಂುೋಜನೆಂುಲ್ಲಿದ್ದಾರೆ. ಅಲ್ಲದೆ, ತನಗೆ ಮತ್ತೊಂದು



ಜೀವ ಬೆದರಿಕೆ ಪತ್ರ ಬಂದಿರುವುದಾಗಿ ಮತ್ತು ಅದರಲ್ಲಿ ತನ್ನನ್ನು ಎನ್ಕೌಂಟರ್ ಮಾಡುವುದಾಗಿ ಬೆದರಿಕೆ ಹಾಕಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಗಂಭೀರ ಆರೋಪ ಮಾಡಿದ್ದಾರೆ.

ಕಲಬುರಗಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಬಿಜೆಪಿಯವರು ಈ ಲೋಕಸಭೆ ಚುನಾವಣೆಯಲ್ಲಿ ಗೊಂದಲ ಸೃಷ್ಟಿಸಿ ಕಾನೂನು ಸುವ್ಯವಸ್ಥೆ ಹಾಳು ಮಾಡುತ್ತಿದ್ದಾರೆ. ಗಲಭೆ ಸೃಷ್ಟಿ ಮಾಡಿ ಚುನಾವಣೆ ಮಾಡಬೇಕು ಅಂತಿದ್ದಾರೆ. ನನ್ನ ಹೆಣ ಬೀಳಿಸಿಯಾದರೂ ಚುನಾವಣೆ ಗೆಲ್ಲಬೇಕು ಎಂಬ ಪ್ಲಾನ್ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ.

ಜೀವಬೆದರಿಕೆ: ನನಗೆ ಮತ್ತೊಂದು ಜೀವ ಬೆದರಿಕೆ ಬಂದಿದೆ. ಅದರಲ್ಲಿ ನನ್ನನ್ನು ಎನ್ಕೌಂಟರ್ ಮಾಡುವುದು ಸತ್ಯ ಎಂದು ಬೆದರಿಕೆ ಹಾಕಲಾಗಿದೆ ಅಲ್ಲದೆ, ಈ ಬೆದರಿಕೆ ಪತ್ರ ಫಿನ್ಲ್ಯಾಂಡ್ನಿಂದ ಬಂದಿದೆ ಎಂದು ಹೇಳಿ ಸಚಿವ ಪ್ರಿಯಾಂಕ್ ಖರ್ಗೆ ಸುದ್ದಿಗೋಷ್ಠಿಯಲ್ಲಿ ಜೀವ ಬೆದರಿಕೆ ಪತ್ರ ಓದಿದರು.

"ಪಂಚಾಮೃತದಿಂದ ಪೂಜೆ ಮಾಡಿದರೂ ನಿನ್ನ ಜಾತಿ ಬೇರೆಯಾಗುವುದಿಲ್ಲ. ಎಂತ ವೇಷ ಭೂಷಣ ಹಾಕಿದರೂ ನಿನ್ನ ಜಾತಿ ಬದಲಾಗುವುದಿಲ್ಲ. ಮಂತ್ರಿಯಾಗು, ರಾಜನಾಗೂ, ನಿನ್ನ ಸೊಕ್ಕು ಹೊಲೆಯ–ಮಾದಿಗ ಓಣಿಯಲ್ಲಿ ನಡೆಯುತ್ತೆ" ಎಂದು ಪತ್ರದಲ್ಲಿ ಅಶ್ಲೀಲ ಪದ ಬಳಸಿದ್ದಾರೆ. ಖಾಕಿಯಾದರೂ, ಖಾದಿಯಾದರೂ, ಯಾರಿಂದಲಾದರೂ ನಿನ್ನನ್ನು ಎನ್ಕೌಂಟರ್ ಮಾಡುವುದು ಸತ್ಯ ಎಂದು ಪತ್ರದಲ್ಲಿ ಬರೆಯಲಾಗಿದೆ ಎಂದರು.

ಬೆದರಿಕೆ ಸಂಬಂಧ ಮಾರ್ಚ್ 13 ರಂದು ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಿಸಿದ್ದೇನೆ. ವಿಕಾಸೌಧದಲ್ಲಿರುವ ನನ್ನ ಕಚೇರಿಗೆ ಕಲಬುರಗಿಯಿಂದಲೇ ಪತ್ರ ಬಂದಿದೆ. ಹೆದರಿಸುವುದು ಅಥವಾ ಬೆದರಿಸಲು ಬಂದರೆ ಅದಕ್ಕೆಲ್ಲ ನಾವು ಹೆದರುವುದಿಲ್ಲ ಎಂದರು.

# ಸಚಿವ ಶಿವರಾಜ ತಂಗಡಗಿ ಹೇಳಿಕೆ ವಿರುದ್ಧ ಬಿಜೆಪಿ ಯುವ ಮೋರ್ಚಾ ಪ್ರತಿಭಟನೆ

ಬಾಗಲಕೋಟೆ: ಮೋದಿ ಹಾಗೂ ಯುವ ಜನತೆಯ ವಿರುದ್ಧ ದುರ್ನಡತೆಯ ಹೇಳಿಕೆ ನೀಡಿದ ಸಚಿವ ಶಿವರಾಜ ತಂಗಡಗಿ ಬೇಷರತ್ ಬಹಿರಂಗವಾಗಿ ಕ್ಷಮೆಯಾಚಿಸಬೇಕೆಂದು ಬೆಳಗಾವಿ ಪ್ರಭಾರಿ ಬಸವರಾಜ ಯಂಕಂಚಿ ಹೇಳಿದರು.

ಅವರು ನಗರದ ಬಸವೇಶ್ವರ ವೃತ್ತದಲ್ಲಿ ಗುರುವಾರ ಕಾಂಗ್ರೆಸ್ ಸರಕಾರ ಸಚಿವರ ಶಿವರಾಜ ತಂಗಡಗಿ ಅವರು ಪ್ರಧಾನಿ ಮೋದಿ ವಿರುದ್ಧ ಮತ್ತು ದೇಶದ ಯುವ ಸಮೂಹದ ವಿರುದ್ಧ ಅವಹೇಳನಕಾರಿ ನೀಡಿರುವ ಹೇಳಿಕೆ ಹಾಗೂ ಅವರ ದುರ್ನಡತೆವರ್ತನೆ ಖಂಡಿಸಿ ಭಾರತೀಯ ಜನತಾ ಪಕ್ಷದ ಯುವ ಮೋಚಾ ಜಿಲ್ಲಾ ಘಟಕದಿಂದ ಹಮ್ಮಿಕೊಂಡ ಪ್ರತಿಭಟನೆಯನ್ನೂದ್ದೇಶಿಸಿ ಮಾತನಾಡಿದರು.

ಮೋದಿ ಹಾಗೂ ಯುವ ಜನತೆಯ ವಿರುದ್ಧ ನೀಡಿರುವ ಹೇಳಿಕೆ ಅವರು ಬೇಷರತ್ತ ಬಹಿರಂಗವಾಗಿ ಕ್ಷಮಾಪಣೆ ಕೇಳಬೇಕೆಂದು ಆಗ್ರಹಿಸಿದ ಅವರು ಯುವ ಸಮೂಹ ಎದ್ದು ನಿಂತು ಮೋದಿಯವರನ್ನು ಗೆಲ್ಲಿಸುವ ಮೂಲಕ ನಿಮ್ಮ ಕಪಾಳ




ಮೋಕ್ಷ ಮಾಡುವ ಕಾಲ ಸನ್ನಿತವಾಗಿದೆ, ಮತದಾನದ ಮೂಖಾಂತರ ನಿಮಗೆ ತಕ್ಕ ಪಾಠ ಕಲಿಸುವುದಾಗಿ ಏಚ್ಚರಿಸಿದರು. ಜಿಲ್ಲಾ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಭುವನೇಶ್ವರ ಪೂಜಾರ ಮಾತನಾಡಿ ಶಿವರಾಜ ತಂಗಡಿಯವರು ಕಾರಟಗಿಯಲ್ಲಿ ಚುನಾವಣಾ ಪ್ರಚಾರದಲ್ಲಿ ಮೋದಿ ಮೋದಿಯನ್ನುವರಿಗೆ ಕಪಾಳಕ್ಕೆ ಹೊಡೆಯಿರಿ ಎಂದು ಹೇಳಿಕೆ ನಿಡಿದ್ದು ಖಂಡನೀಯ, ಲೋಕಸಭಾ ಚುನಾವಣೆ ಪ್ರಚಾರಕ್ಕೆ ನೀವು ಬಾಗಲಕೋಟೆಗೆ ಬಂದಾಗ ನಿಮಗೆ ನಮ್ಮ ಯುವ ಮೋರ್ಚಾದಿಂದ ಕಪ್ಪು ಮಸಿ ಬಳೆಯುತ್ತೆವೆ ಎಚ್ಚರಿಸಿದ ಅವರು ಭಾರತ ಪರವಾಗಿ ಇರುವವರನ್ನು ಕಪಾಳೆಕ್ಕೆ ಹೋಡೆಯಿರಿ ಎಂದು ಹೇಳುವ ನೀವು ನಿಮಗೆ ತಾಕತ್ ಇದ್ದರೆ ಮೊನ್ನೆ ಪಾಕಿಸ್ತಾನ ಜಿಂದಾಬಾದ ಎನ್ನುವವರಿಗೆ ಕಪಾಳಕ್ಕೆ ಮೊದಲು ಹೊಡೆಯಿರಿ ಎಂದರು.

ಯುವಮೋರ್ಚಾ ಜಿಲ್ಲಾಧ್ಯಕ್ಷ ಆನಂದ ಇಂಗಳಗಾಂವಿ ಮಾತನಾಡಿ ಪ್ರಧಾನಿ ನರೇಂದ್ರಮೋದಿಯವರ ಆಡಳಿತ ಇಡಿ ಭಾರತಕ್ಕೆ ಬೇಕಾಗಿದೆ, ಆದರೆ ರಾಜ್ಯದಲ್ಲಿ ಕಾಂಗ್ರೇಸ್ಸ ಸರಕಾರ ಅಧಿಕ್ಕಾರಕ್ಕೆ ಬಂದ ನಂತರ ರಾಜ್ಯದಲ್ಲಿ ಬರಿ ದೇಶದ್ರೋಹಿ ಹೇಳಿಕೆಗಳು ಹೆಚ್ಚಾಗುತ್ತಿವೆ, ಕಾಂಗ್ರೇಸ್ಸಿಗೆ ಭಾರತದ ಮೇಲೆ ಪ್ರೇಮ ಇಲ್ಲವೆ,ನಿಮಗೆ ದೇಶಭಕ್ತಿಯಿಲ್ಲವೆ ಎನ್ನುವುದನ್ನು ಜನತೆಗೆ ತಿಳಿಸಿ, ಶಿವರಾಜ ತಂಗಡಗಿ ಅವರ ಉದ್ಧಟತನದ ಹೇಳಿಕೆ ಖಂಡನೀಯ ಜನತೆ ಇವರನ್ನು ಕ್ಷಮಿಸುವುದಿಲ್ಲಾ ಎಂದರು.

ಪ್ರತಿಭಟನೆಯಲ್ಲಿ ಜಿಲ್ಲಾ ಮಾಧ್ಯಮ ವಕ್ತಾರ ಸತ್ಯನಾರಾಯಣ ಹೇಮಾದ್ರಿ, ಶಿವಾನಂದ ಟವಳಿ, ನಗರ ಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಉಮೇಶ ಹಂಚಿನಾಳ, ರೇಖಾ ಕಲಬುರಗಿ,ಶಶಿಕಲಾ ಮಜ್ಜಗಿ, ಶ್ರೀನಾಥ ಸಜ್ಜನ,ಅನಂತ ಕೊಟಗಿ,ಚಂದ್ರು ಸರೂರ,ಮಂಜುನಾಥ ಗೌಡರ,ಪಾಲಾಕ್ಷ್ಯ ಕಟ್ಟಿಮಠ, ಗಣೇಶ ಲಗಳಿ,ಬಸವರಾಜ ಅಂಬಿಗೇರ, ಮಂಜುನಾಥ ವಾಲ್ಮೀಕಿ,ರಾಜು ಕೋಟೆಇಕಲ್,ಚಂದ್ರಶೇಖರ ಬುಡ್ಡರ, ಸುರೇಶ ಉಕ್ಕಲಿ,ಶಂಕರ ಗಲಗ,ಸುರೇಶ ಗಬ್ಬೂರ, ನಾಗರಾಜ ನಾರಾಯಣಕರ,ಶಿವಾನಂದ ರಾಥೋಡ,ಕೀರಣ ರಾಥೋಡ,ಸುರೇಶ ಲಮಾಣಿ,ಮಲ್ಲಿಕಾರ್ಜುನ ಗಬ್ಬೂರ,ಪ್ರಧೀಪ ಗೌಡರ, ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

## ಶೂನ್ಯ ಸಂಪಾದನ ಮಠಕ್ಕೆ ಸಚಿವೆ ಲಕ್ಷ್ಮೀ ಭೇಟಿ



ಗೋಕಾಕ: ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಶ್ರೀಮತಿ ಲಕ್ಷ್ಮೀ ಹೆಬ್ಬಾಳಕರ್ ಅವರು ಗುರುವಾರ ನಗರದ ಶ್ರೀ ಶೂನ್ಯ ಸಂಪಾದನ ಮಠಕ್ಕೆ ಭೇಟಿ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳ ಆಶೀರ್ವಾದ ಪಡೆದರು.

ಇದೇ ಸಂದರ್ಭದಲ್ಲಿ ಮುರುಘರಾಜೇಂದ್ರ ಮಹಾಸ್ವಾಮಿಗಳು ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ ಅವರಿಗೆ ಸತ್ಕರಿಸಿ, ಗೌರವಿಸಿದರು . ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಸಿದ್ದಲಿಂಗ ದಳವಾಯಿ, ಕಾಂಗ್ರೆಸ್ ಮುಖಂಡ ಚಂದ್ರಶೇಖರ್ ಕೊಣ್ಣೂರ , ಡಾ. ಮಹಾಂತೇಶ ಕಡಾಡಿ ಸೇರಿದಂತೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಲೋಕಸಭೆ ಕದನ: ರಾಜ್ಯದ 14 ಕ್ಷೇತ್ರಗಳಿಗೆ ಇಂದಿನಿಂದ ನಾಮಪತ್ರ ಸಲ್ಲಿಕೆ ಆರಂಭ

ಬೆಂಗಳೂರು: ಲೋಕಸಭಾ ಚುನಾವಣೆಗೆ ಗುರುವಾರ ಅಧಿಸೂಚನೆ ಪ್ರಕಟವಾಗಲಿದೆ. ರಾಜ್ಯದಲ್ಲಿ ಒಟ್ಟು 28 ಲೋಕಸಭಾ ಕ್ಷೇತ್ರಗಳ ಪೈಕಿ ಮೊದಲ ಹಂತದಲ್ಲಿ 14 ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದ್ದು, ಅಧಿಸೂಚನೆ ಪ್ರಕಟಗೊಂಡ ಬೆನ್ನಲ್ಲೇ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದೆ.

ಲೋಕಸಭಾ ಸಾರ್ವತ್ರಿಕ ಚುನಾವಣೆಯು ಈಗಾಗಲೇ ಘೋಷಣೆಯಾಗಿದ್ದು, ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ಆ ದಿಸೆಯಲ್ಲಿ ರಾಜ್ಯದ 14 ಲೋಕಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಇಂದು ಚುನಾವಣೆ ಅಧಿಸೂಚನೆ ಹೊರಡಿಸಲಾಗುತ್ತದೆ. ಇಂದಿನಿಂದಲೇ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಆರಂಭವಾಗಲಿದೆ.

ನಾಮಪತ್ರ ಸಲ್ಲಿಸಲು ಏಪ್ರಿಲ್, 04 ಕೊನೆಯ ದಿನವಾಗಿದೆ. ಏಪ್ರಿಲ್, 05 ರಂದು ನಾಮಪತ್ರ



ಪರಿಶೀಲನೆ ಕಾರ್ಯ ನಡೆಯಲಿದ್ದು, ಏಪ್ರಿಲ್, 08 ರಂದು ನಾಮಪತ್ರ ವಾಪಸ್ಸು ಪಡೆಯಲು ಕಡೆಯ ದಿನವಾಗಿದೆ. ಏಪ್ರಿಲ್, 26 ರಂದು ಮತದಾನ ನಡೆಯಲಿದ್ದು, ಜೂನ್, 04 ರಂದು ಮತ ಎಣಿಕೆ ಕಾರ್ಯ ನಡೆಯಲಿದೆ.

ಮೊದಲ ಹಂತದಲ್ಲಿ 14 ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ

ಉಡುಪಿ–ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ,

ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿ ಖಾತರಿಪಡಿಸಿಕೊಳ್ಳುವುದು, ಮತಗಟ್ಟೆ ಬಗ್ಗೆ ಮಾಹಿತಿ ಪಡೆಯುವುದು ಇತರೆ ಚುನಾವಣೆ ವಿಷಯಗಳಿಗೆ ಸಂಬಂಧಿಸಿದಂತೆ ದೂರು ಸಲ್ಲಿಸಲು/ ಮಾಹಿತಿಯನ್ನು ಪಡೆಯಲು ಜಿಲ್ಲಾಧಿಕಾರಿ ಅವರ ಕಚೇರಿಯಲ್ಲಿ ಟೋಲ್ ಫ್ರೀ ಸಂಖ್ಯೆ 1950 ಕ್ಕೆ ಕರೆ ಮಾಡಬಹುದಾಗಿದೆ. ಹಾಗೆಯೇ ವೋಟರ್ ಸಹಾಯವಾಣಿ 24*7 ಕಾರ್ಯನಿರ್ವಹಿಸಲಾಗುತ್ತದೆ.

ಚುನಾವಣಾ ಆಯೋಗದ ಸೂಚನೆಯಂತೆ ಪ್ರತಿ ಮತಗಟ್ಟೆಗಳಿಗೆ ಒಬ್ಬರು ಅಧ್ಯಕ್ಷಾಧಿಕಾರಿ ಮತ್ತು ಮೂವರು ಮತಗಟ್ಟೆ ಅಧಿಕಾರಿಗಳು ಹಾಗೂ ಮೀಸಲು ಸಿಬ್ಬಂದಿಗಳನ್ನು ನೇಮಕ ಮಾಡಲಾಗುತ್ತದೆ. ಅದೇ ರೀತಿ ಕೇಂದ್ರ ಸರ್ಕಾರಿ ಅಧಿಕಾರಿ/ ಸಿಬ್ಬಂದಿಗಳನ್ನು ಆಯ್ದ ಮತಗಟ್ಟೆಗಳಿಗೆ ಮೈಕ್ರೋ ವೀಕ್ಷಕರನ್ನಾಗಿ ನೇಮಕ ಮಾಡಲಾಗುತ್ತದೆ.

ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾ–ರಿಗೊಳಿಸಲು ಹಾಗೂ ಅಭ್ಯರ್ಥಿಗಳ ಚುನಾವಣಾ ವೆಚ್ಚದ ಮೇಲೆ ನಿಗಾ ಇಡಲು ಸೆಕ್ಟರ್ ಅಧಿಕಾ–ರಿಗಳು ಫ್ಲೈಯಿಂಗ್ ಸ್ಕ್ವಾಡ್, ಲೆಕ್ಕ ವೀಕ್ಷಕರ ತಂಡ, ವಿಡಿಯೋ ವಿವಿಂಗ್ ತಂಡ, ವಿಡಿಯೋ ಪರಿಶೀಲನಾ ತಂಡ, ಸಹಾಯಕ ವೆಚ್ಚ ವೀಕ್ಷಕರ ತಂಡಗಳನ್ನು ರಚಿಸಲಾಗಿದೆ.

# ಪಿ. ಎನ್. ಗಾಡ್ಗಿಲ್ ಜ್ಯುವೆಲರ್ಸ್ ನಿಂದ ಡಿಆರ್‌ಎಚ್‌ಪಿ ಸಲ್ಲಿಕೆ

ಹುಬ್ಬಳ್ಳಿ: ಪಿ ಎನ್ ಗಾಡ್ಗಿಲ್ ಜ್ಯುವೆಲರ್ಸ್ ಲಿಮಿಟೆಡ್, ಮಹಾರಾಷ್ಟ್ರದಲ್ಲಿ 2024 ರ ಜನವರಿವರೆಗೆ ಮಳಿಗೆಗಳ ಸಂಖ್ಯೆಯ ಪ್ರಕಾರ ಪ್ರಮುಖ ಸಂಘಟಿತ ಆಭರಣ ತಯಾರಕರಲ್ಲಿ ಎರಡನೇ ಅತಿ ದೊಡ್ಡದಾಗಿದೆ, ಭಾರತದಲ್ಲಿ ಬಿಐಎಸ್ ನೋಂದಾಯಿತ ಮಳಿಗೆಗಳಿಗೆ ತನ್ನ ಕರಡು ವಿವರಣಾ ಪುಸ್ತಿಕೆ (ಡಿಆರ್‌ಎಚ್‌ಪಿ ) ಅನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯು–ರಿಟೀಸ್ ಮತ್ತು ಎಕ್ಸ್ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ)ಗೆ ಸಲ್ಲಿಸಿದೆ.

ಕಂಪನಿಯ ಆರಂಭಿಕ ಸಾರ್ವಜನಿಕ ಕೊಡುಗೆಯು ರೂ 10 ರ ಮುಖಬೆಲೆಯ ಈಕ್ವಿಟಿ ಷೇರುಗಳ ಹೊಸ ಸಂಚಿಕೆಯನ್ನು ಒಳಗೊಂಡಿರುತ್ತದೆ, ಪ್ರತಿಯೊಂದೂ ಒಟ್ಟು ರೂ 8,500 ಮಿಲಿಯನ್‌ಗಳವರೆಗೆ ಮತ್ತು ರೂ 10 ರ ಮುಖಬೆಲೆಯ ಈಕ್ವಿಟಿ ಷೇರುಗಳ ಮಾರಾಟದ ಕೊಡುಗೆಯನ್ನು ರೂ 2,500 ಮಿಲಿಯನ್‌ವರೆಗೆ ಒಟ್ಟುಗೂಡಿಸುತ್ತದೆ. ಒಟ್ಟು ಕೊಡುಗೆ ಗಾತ್ರವು ರೂ 10 ರ ಮುಖಬೆಲೆಯ ಈಕ್ವಿಟಿ ಷೇರುಗಳನ್ನು ಒಟ್ಟು ರೂ 11,000 ಮಿಲಿಯನ್ ವರೆಗೆ ಒಳಗೊಂಡಿರುತ್ತದೆ. ಐಪಿಓ ಮೂಲಕ ಸಂಗ್ರಹಿಸಿದ ಹಣವನ್ನು ಮಹಾರಾಷ್ಟ್ರದಲ್ಲಿ 12 ಹೊಸ ಮಳಿಗೆಗಳನ್ನು ಸ್ಥಾಪಿಸಲು, ಕಂಪನಿಯು ಪಡೆದ ಕೆಲವು ಸಾಲಗಳ ಪೂರ್ಣ ಅಥವಾ ಭಾಗಶಃ ಮರುಪಾವತಿ ಅಥವಾ ಪೂರ್ವ–ಪಾವತಿಗಾಗಿ ವೆಚ್ಚದ ನಿಧಿಗಾಗಿ ಮತ್ತು ಸಾಮಾನ್ಯ ಕಾರ್ಪೊರೇಟ್ ವೆಚ್ಚಕ್ಕಾಗಿ ಬಳಸಿಕೊಳ್ಳಲು ಪ್ರಸ್ತಾಪಿಸಲಾಗಿದೆ. ಭಾರತದಲ್ಲಿ ಪ್ರಮುಖ ಸಂಘಟಿತ ಆಭರಣ ತಯಾರಕ ಕಂಪನಿಯು ವೇಗವಾಗಿ ಬೆಳೆಯುತ್ತಿರುವ ಆಭರಣ ಬ್ರ್ಯಾಂಡ್ ಆಗಿದೆ.

ಡಿಸೆಂಬರ್ 31, 2023 ರಂತೆ, ಕಂಪನಿಯು 33 ಸ್ಟೋರ್‌ಗಳಿಗೆ ವಿಸ್ತರಿಸಿದೆ, ಇದರಲ್ಲಿ ಮಹಾರಾಷ್ಟ್ರ ಮತ್ತು ಗೋವಾದ 18 ನಗರಗಳಲ್ಲಿ 32 ಸ್ಟೋರ್‌ಗಳು ಮತ್ತು ಅಮೇರಿಕಾದ ಒಂದು ಮಳಿಗೆಯು ಸರಿಸುಮಾರು 95,885 ಚದರ ಅಡಿಗಳ ಒಟ್ಟು ಚಿಲ್ಲರೆ ಪ್ರದೇಶವನ್ನು ಒಳಗೊಂಡಿದೆ. 23 ಕಂಪೆನಿ ಒಡೆತನದ ಮಳಿಗೆಗಳು ಮತ್ತು 10 ಫ್ರಾಂಚೈಸಿ ಮಳಿಗೆಗಳನ್ನು ಹೊಂದಿರುವ ಕಂಪನಿಯಾಗಿದ್ದು , ಫ್ರ್ಯಾಂಚೈಸಿ ಒಡೆತನದ ಮತ್ತು ಕಂಪನಿಯ ನಿರ್ವಹಣೆಯ ಮಾದ–ರಿಯಲ್ಲಿ ನಡೆಸಲಾಗುತ್ತಿದೆ.

ಡಿಜಿಟಲ್ ಉಪಸ್ಥಿತಿಯು ಗ್ರಾಹಕರನ್ನು ಹೊಸ ವಿನ್ಯಾಸಗಳು ಮತ್ತು ಸಂಗ್ರಹಣೆಗಳ ಕುರಿತು ಅಪ್‌ಡೇಟ್ ಮಾಡಲು ಮತ್ತು ಉತ್ಪನ್ನ ಪೋರ್ಟ್‌ಫೋಲಿಯೊದೊಂದಿಗೆ ಅವರಿಗೆ ಪರಿಚಿತರಾಗಲು ಅನುಮತಿಸುತ್ತದೆ. ಎಲ್ಲಾ ಆಭರಣಗಳ ತಯಾರಿಕೆಯನ್ನು ಮಹಾರಾಷ್ಟ್ರದಲ್ಲಿ ಮತ್ತು ಹೊರಗೆ 75 ಕ್ಕೂ ಹೆಚ್ಚು ಅನುಭವಿ ಮತ್ತು ನುರಿತ ಕುಶಲಕರ್ಮಿಗಳು ನಡೆಸುತ್ತಾರೆ. ಅವರು ಪ್ರಸ್ತುತ ಬ್ರ್ಯಾಂಡ್ ಪ್ರಚಾರ ಮಾಡಲು ಖ್ಯಾತ ನಟಿ ಮಾಧುರಿ ದೀಕ್ಷಿತ್ ಅವರನ್ನು ಬ್ರಾಂಡ್ ಅಂಬಾಸಿಡರ್ ಆಗಿ ನೇಮಿಸಿಕೊಂಡಿದ್ದಾರೆ.

ಇದು 1832 ರ ಹಿಂದಿನ ಶ್ರೀಮಂತ ಪರಂಪರೆಯನ್ನು ಹೊಂದಿದೆ., ಚಿನ್ನ, ಬೆಳ್ಳಿ, ಪ್ಲಾಟಿನಂ ಮತ್ತು ವಜ್ರದ ಆಭರಣಗಳನ್ನು ಒಳಗೊಂಡಂತೆ ವಿವಿಧ ಬೆಲೆಗಳು ಮತ್ತು ವಿನ್ಯಾಸಗಳಲ್ಲಿ ವ್ಯಾಪಕ ಶ್ರೇಣಿಯ ಅಮೂಲ್ಯವಾದ ಲೋಹ / ಆಭರಣ ಉತ್ಪನ್ನಗಳನ್ನು ನೀಡುತ್ತದೆ. ಪ್ರವರ್ತಕ, ಸೌರಭ್ ವಿದ್ಯಾಧರ್ ಗಾಡ್ಗಿಲ್, ಆರನೇ ತಲೆಮಾ–ರಿನ ಉದ್ಯಮಿ ಮತ್ತು ಭಾರತದಲ್ಲಿ ಆಭರಣ ತಯಾರಿಕಾ ಉದ್ಯಮದಲ್ಲಿ 25 ವರ್ಷಗಳ ಅನುಭವ ಹೊಂದಿದ್ದಾರೆ. ಈ ಕೊಡುಗೆಗೆ ಮೋತಿಲಾಲ್ ಓಸ್ವಾಲ್ ಇನ್ವೆಸ್ಟ್‌ಮೆಂಟ್ ಅಡ್ವೈಸರ್ಸ್ ಲಿಮಿಟೆಡ್, ನುವಾಮಾ ವೆಲ್ತ್ ಮ್ಯಾನೇಜ್‌ಮೆಂಟ್ ಲಿಮಿಟೆಡ್ ಮತ್ತು ಬಿಒಬಿ ಕ್ಯಾಪಿಟಲ್ ಮಾರ್ಕೆಟ್ಸ್ ಲಿಮಿಟೆಡ್ ಈ ಪುಸ್ತಕ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳಾಗಿವೆ.

## ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯ 63ನೇ ಪದವಿ ಪ್ರದಾನ ಸಮಾರಂಭ

# ವೈದ್ಯಕೀಯ ಪದವೀಧರರು ಉತ್ತಮ ವೈದ್ಯಕೀಯ ಸೇವೆ ನೀಡಿ: ಡಾ.ಚಂದ್ರಮೋಹನ್

ಬಳ್ಳಾರಿ: ವೈದ್ಯಕೀಯ ಪದವಿ ಪೂರ್ಣಗೊಳಿಸಿದ ಪಧವೀದರರು ಸಮಾಜದಲ್ಲಿ ಉತ್ತಮ ವೈದ್ಯಕೀಯ ಸೇವೆ ನೀಡಬೇಕು ಎಂದು ತಮಿಳುನಾಡು ಸರ್ಕಾರದ ಲೋಕೋಪಯೋಗಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಚಂದ್ರಮೋಹನ್.ಬಿ ಅವರು ಹೇಳಿದರು.

ಇಲ್ಲಿಯ ವಿಮ್ಸ್ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ 63ನೇ ಪದವಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವೈದ್ಯಕೀಯ ವೃತ್ತಿಯಲ್ಲಿ ತೊಡಗುವವರು ವೈದ್ಯಕೀಯ ಕ್ಷೇತ್ರಕ್ಕೆ ಸೀಮಿತವಾಗದೇ, ಬಾಹ್ಯ ಪ್ರಪಂಚವನ್ನು ಉತ್ಸುಕದಿಂದ ಅನ್ವೇಷಿಸುವ ಕಾರ್ಯ ಪ್ರವೃತ್ತಿ ಬೆಳೆಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ವೈದ್ಯಕೀಯ ಪದವಿ ಪೂರ್ಣಗೊಳಿಸಿದವರು ನೀವು ಎಷ್ಟು ದೂರ ಬಂದಿದ್ದೀರಿ ಎಂಬುದರ ಬಗ್ಗೆ ಹೆಮ್ಮೆಪಡಬೇಕು ಮತ್ತು ಅದೇರೀತಿ ಎಷ್ಟು ಎತ್ತರ ಬೆಳೆಯಬಹುದು ಎಂಬುದರಲ್ಲಿ ನಂಬಿಕೆ ಇಟ್ಟು, ಜನಸಾಮಾನ್ಯರಿಗೆ ಪ್ರಾಮಾಣಿಕ ಸೇವೆ ನೀಡುವುದರ ಮೂಲಕ ತಮ್ಮ ಕರ್ತವ್ಯವನ್ನು ಆನಂದಿಸಬೇಕು ಎಂದು ಕಿವಿಮಾತು ಹೇಳಿದರು.

ವೈದ್ಯಕೀಯ ವಿದ್ಯಾರ್ಥಿಗಳು ಹೃದಯದಲ್ಲಿ ಧೈರ್ಯ, ಮನಸ್ಸಿನಲ್ಲಿ ನಮ್ರತೆ ಮತ್ತು ಬದಲಾವಣೆ ರೂಪಿಸುವ ಅಚಲ ಸಂಕಲ್ಪದೊಂದಿಗೆ ಮುಂದುವರಿಯಿರಿ ಎಂದು ಕರೆ ನೀಡಿದರು.

ಜಿಲ್ಲಾಧಿಕಾರಿ ಹಾಗೂ ವಿಮ್ಸ್ ಆಡಳಿತ ಮಂಡಳಿಯ ಸದಸ್ಯರಾದ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಾತನಾಡಿ, ವೈದ್ಯರು ರೋಗಿಗಳೊಡನೆ ಉತ್ತಮವಾಗಿ ಸ್ಪಂದಿಸಿ ತಾಳ್ಮೆಯಿಂದ ವರ್ತಿಸುವುದು ವೈದ್ಯರ ಆದ್ಯ ಕರ್ತವ್ಯವಾಗಿದ್ದು, ಸಹಕಾರ-ಸಹಾಯ



ಮನೋಭಾವನೆ ಗುಣ ವೈದ್ಯರಲ್ಲಿ ಇರಬೇಕು. ಇದರಿಂದ ಜಿಲ್ಲೆಯ ಜನ ಸಾಮಾನ್ಯರು ತಮ್ಮ ಬಗ್ಗೆ ಹೆಮ್ಮೆಪಡಬೇಕು ಎಂದು ಹೇಳಿದರು.

ವಿಮ್ಸ್ನ ನಿರ್ದೇಶಕ ಹಾಗೂ ಡೀನ್ ಆದ ಡಾ.ಟಿ.ಗಂಗಾಧರ ಗೌಡ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಕಲಿಕೆ ಎನ್ನುವುದು ಜೀವನದುದ್ದಕ್ಕೂ ಇದ್ದು, ಇದಕ್ಕೆ ಕೊನೆಯಿಲ್ಲ, ವೈದ್ಯಕೀಯ ವಿದ್ಯಾರ್ಥಿಗಳು ಪ್ರಸ್ತುತವಿರುವ ಜ್ಞಾನಕ್ಕೆ ತಕ್ಕಂತೆ ನವೀಕರಣಗೊಂಡು ಅಭಿವೃದ್ಧಿ ಹೊಂದಬೇಕು ಎಂದು ಕಿವಿ ಮಾತು ಹೇಳಿದರು.

ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ವೈದ್ಯಕೀಯ ಪದವಿ ಪಡೆದ ಪದವೀಧರರು ವಿಶ್ವದಾದ್ಯಂತ ಮನ್ನಣೆಗಳಿಸಿದ್ದಾರೆ. ಅವರಂತೆ ತಾವೂ ಕೂಡ ಸಾಧನೆಯ ಮೈಲಿಗಲ್ಲು ತಲುಪಬೇಕು ಎಂದು ಪದವಿ ಪಡೆದ ವೈದ್ಯಕೀಯ ವಿದ್ಯಾರ್ಥಿಗಳನ್ನು ಆಶಿಸಿದರು.

ಯು.ಎಸ್.ಎ ನ ವಾಸ್ಕ್ಯುಲರ್ ಶಸ್ತ್ರಚಿಕಿತ್ಸಕ ಡಾ.ಪಿ.ವಿ.ಪತಂಜಲಿ ಶರ್ಮಾ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿ, ಬಳ್ಳಾರಿಯಲ್ಲಿ ಮೆಡಿಕಲ್ ಕಾಲೇಜ್ ನಿರ್ಮಾಣದ ಕನಸು ಈಗ ನನಸಾಗಿದ್ದು, ನನ್ನ ಎಲ್ಲಾ ಸಾಧನೆಗೆ ವಿಮ್ಸ್ ಸಂಸ್ಥೆಯು ಅಡಿಪಾಯವಾಗಿದೆ ಎಂದರು.

ಕಳೆದ ಸಾಲಿನಿಂದ ಡಾ.ಪಿ.ವಿ.ಪತಂಜಲಿ ಶರ್ಮಾ ಅವರ ಪ್ರಾಯೋಜಕತ್ವದಲ್ಲಿ ಬಂಗಾರದ ಪದಕ ಮತ್ತು ಹತ್ತು ಸಾವಿರ ನಗದು ಹಣವನ್ನು ರ್ಯಾಂಕ್ ಪಡೆದ ಮೂರು ವೈದ್ಯಕೀಯ ವಿದ್ಯಾರ್ಥಿಗಳಿಗೆ ಕೊಡುಗೆಯಾಗಿ ನೀಡಲಾಗುತ್ತಿದೆ. ಇದು ಸಂತಸದ ವಿಷಯವಾಗಿದೆ ಎಂದು ತಿಳಿಸಿದರು.

ಸಮಾರಂಭದಲ್ಲಿ 95 ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳು ಹಾಗೂ 55 ಸ್ನಾತಕ ಪದವಿ ವೈದ್ಯಕೀಯ ವಿದ್ಯಾರ್ಥಿಗಳು ಸೇರಿದಂತೆ 150 ವೈದ್ಯಕೀಯ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

ಈ ಸಂಧರ್ಭದಲ್ಲಿ ಕರ್ನಾಟಕ ವೈದ್ಯಕೀಯ ಮಂಡಳಿಯ ಸದಸ್ಯ ಡಾ.ವೈ.ಸಿ.ಯೋಗಾನಂದ ರೆಡ್ಡಿ, ವಿಮ್ಸ್ನ ಪ್ರಭಾರಿ ಪ್ರಾಂಶುಪಾಲ ಡಾ.ಮಲ್ಲಿಕಾರ್ಜುನ, ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರಾದ ಸುಮಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು, ಜಿಲ್ಲಾ ಆಸ್ಪತ್ರೆಯ ನಿರ್ದೇಶಕ ಮತ್ತು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ.ಎನ್ ಸೇರಿದಂತೆ ವಿಮ್ಸ್ನ ಹಳೆಯ ವಿದ್ಯಾರ್ಥಿಗಳು, ನಿವೃತ್ತ ಪ್ರಾಂಶುಪಾಲರು, ವೈದ್ಯಕೀಯ ವಿದ್ಯಾರ್ಥಿಗಳು, ಪೋಷಕರು ಮತ್ತು ಇನ್ನಿತರರು ಉಪಸ್ಥಿತರಿದ್ದರು.

# ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ವಾರ್ಷಿಕ ಪ್ರಶಸ್ತಿ ಘೋಷಣೆ

ಬೆಂಗಳೂರು: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಪ್ರತಿ ವರ್ಷ ಕೊಡುವ ಕೆಯುಡಬ್ಲ್ಯೂಜೆ ದತ್ತಿ ನಿಧಿ ಪ್ರಶಸ್ತಿಯನ್ನು ಪ್ರಕಟಿಸಲಾಗಿದೆ. ದತ್ತಿನಿಧಿ ಪ್ರಶಸ್ತಿಗಳು ತಲಾ 5 ಸಾವಿರ ರೂ ನಗದು, ಪ್ರಶಸ್ತಿ ಪಲಕ ಮತ್ತು ಗೌರವ ಪುರಸ್ಕಾರಗಳನ್ನು ಹೊಂದಿರುತ್ತದೆ. ಚಿತ್ರದುರ್ಗದಲ್ಲಿ ಏಪ್ರಿಲ್ 1 ರಂದು ನಡೆಯಲಿರುವ ಕಾರ್ಯಕ್ರಮದಲ್ಲಿ ದತ್ತಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ತಿಳಿಸಿದ್ದಾರೆ.

**ಪ್ರಶಸ್ತಿಗಳ ವಿವರ:-**

ಡಾ. ಬಾಬಾ ಸಾಹೇಬ ಅಂಬೇಡ್ಕರ್ ಪ್ರಶಸ್ತಿ: ಬಿ.ಎಂ.ಬಶೀರ್, ಮಂಗಳೂರು. ಗೊಮ್ಮಟ ಮಾಧ್ಯಮ ಪ್ರಶಸ್ತಿ: ಕುಂತಿನಾಥ ಶ್ರೀ ಕಲಮನಿ, ಬೆಳಗಾವಿ ಡಿವಿಜಿ ಪ್ರಶಸ್ತಿ: ವಿ.ವೆಂಕಟೇಶ್, ಬೆಂಗಳೂರು ಸಿ.ಆರ್.ಕೃಷ್ಣರಾವ್(ಸಿಆರ್‌ಕೆ) ಪ್ರಶಸ್ತಿ: ಸಿ.ಜಿ.ಮಂಜುಳ, ಬೆಂಗಳೂರು ಯಶೋಧಮ್ಮ ಜಿ ನಾರಾಯಣ ಪ್ರಶಸ್ತಿ: ಮಲ್ಲಿಗೆ ಮಾಚಮ್ಮ, ಮೈಸೂರು. ಎಸ್.ವಿ.ಜಯಶೀಲರಾವ್ ಪ್ರಶಸ್ತಿ: ಮೋಹನ ಹೆಗಡೆ, ಹುಬ್ಬಳ್ಳಿ ಡಾ. ಎಂ.ಎಂ.ಕಲಬುರ್ಗಿ ಪ್ರಶಸ್ತಿ: ಸನತ್ ಕುಮಾರ್ ಬೆಳಗಲಿ ಕಿಡಿ ಶೇಷಪ್ಪ ಪ್ರಶಸ್ತಿ: ಬಿ.ಎಂ.ನಂದೀಶ್, ಹಾಸನ. ಎಚ್.ಎಸ್.ದೊರೆಸ್ವಾಮಿ ಪ್ರಶಸ್ತಿ: ಆರ್. ಜಯಕುಮಾರ್, ಬೆಂಗಳೂರು. ಪಿ.ಆರ್. ರಾಮಯ್ಯ ಪ್ರಶಸ್ತಿ: ಸಿ.ಕೆ.ಮಹೇಂದ್ರ, ಮೈಸೂರು. ಎಚ್.ಕೆ.ವೀರಣ್ಣಗೌಡ ಪ್ರಶಸ್ತಿ: ಅಶೋಕ್ ರಾಮ್, ರಾಮನಗರ. ರಾಜಶೇಖರಕೋಟಿ ಪ್ರಶಸ್ತಿ: ಶಶಿಕುಮಾರ್ ಬಿ ಕೆರೂರ, ಬಾಗಲಕೋಟೆ ಪಿ.ರಾಮಯ್ಯ ಪ್ರಶಸ್ತಿ: ಮನೋಹರ ಮಲ್ಲಾಡದ, ರಾಣೆಬೆನ್ನೂರು ಮ.ರಾಮಮೂರ್ತಿ ಪ್ರಶಸ್ತಿ: ಎಚ್.ಕೆ.ಬಸವರಾಜು, ಬೆಂಗಳೂರು. ಗರುಡನಗಿರಿ ನಾಗರಾಜ್ ಪ್ರಶಸ್ತಿ: ಪ್ರಭುದೇವ ಶಾಸ್ತ್ರಿಮಠ, ಬೆಂಗಳೂರು ಮಹದೇವ ಪ್ರಕಾಶ್ ಪ್ರಶಸ್ತಿ: ವಿಜಯಕುಮಾರ್ ವಾರದ, ಕಲಬುರಗಿ ಶಿವಮೊಗ್ಗದ ಮಿಂಚು ಶ್ರೀನಿವಾಸ್ ಪ್ರಶಸ್ತಿ: ಎನ್.ಬಾಬು, ಭದ್ರಾವತಿ. ಎಚ್.ಎಸ್.ರಂಗಸ್ವಾಮಿ ಪ್ರಶಸ್ತಿ: ನಾಮದೇವ ವಾಟ್ಕರ್, ಯಾದಗಿರಿ ಎಂ.ನಾಗೇಂದ್ರರಾವ್ ಪ್ರಶಸ್ತಿ: ರವಿ ಆರ್, ದಾವಣಗೆರೆ ಗಿರಿ-ಜಮ್ಮ ರುದ್ರಪ್ಪ ತಾಳಿಕೋಟೆ ಪ್ರಶಸ್ತಿ: ಕೆ.ಗೋಪಿಕಾ ಮಲ್ಲೇಶ್, ಕೋಲಾರ. ಗುರುಲಿಂಗಸ್ವಾಮಿ ಹೊಳಿಮಠ ಪ್ರಶಸ್ತಿ: ಆರ್ಸಿ.ಪುಟ್ಟರಾಜು, ಚಾಮರಾಜನಗರ

ವಿಶೇಷ ಪ್ರಶಸ್ತಿ: ಚಿಕ್ಕಪ್ಪನಳ್ಳಿ ಷಣ್ಮುಖ, ಎಸ್.ಬಿ.ರವಿಕುಮಾರ್, ಶ.ಮಂಜುನಾಥ್, ರವಿ ಮಲ್ಲಾಪುರ ಸೇರಿ ಒಟ್ಟು ನಾಲ್ವರಿಗೆ ವಿಶೇಷ ಪ್ರಶಸ್ತಿ ಸಿಕ್ಕಿದೆ.

ಅತ್ಯುತ್ತಮ ವರದಿ ಮಾಡಿದ ಮುದ್ರಣ ಹಾಗು ವಿದ್ಯುನ್ಮಾನ ಮಾಧ್ಯಮದ ವರದಿಗಾರರಿಗೆ ಈ ಪ್ರಶಸ್ತಿ ನೀಡಲಾಗುತ್ತದೆ. ಅದರಲ್ಲೂ ಅತ್ಯುತ್ತಮ ಗ್ರಾಮಾಂತರ ವರದಿ, ಮಾನವೀಯ ವರದಿ, ಅಪರಾಧ ವರದಿ, ಸ್ಕೂಪ್ ವರದಿ, ಕ್ರೀಡಾ ವರದಿ, ರಾಜಕೀಯ ವಿಮರ್ಶಾತ್ಮಕ ಲೇಖನ, ವಾರ ಪತ್ರಿಕೆಯಲ್ಲಿ ಪ್ರಕಟವಾದ ಚಿತ್ರ ಲೇಖನ, ಸುದ್ದಿ ಛಾಯಾಚಿತ್ರ, ಅರಣ್ಯ ಕುರಿತ ವರದಿ, ವನ್ಯ ಪ್ರಾಣಿಗಳ ಕುರಿತ ವರದಿ, ಆರ್ಥಿಕ ದುರ್ಬಲ ವರ್ಗದವರ ಕುರಿತ ವರದಿ, ಗ್ರಾಮೀಣ ಜನ ಜೀವನದ ವರದಿ, ಜಿಲ್ಲಾ ಪತ್ರಿಕೆಗಳಲ್ಲಿ ಪ್ರಕಟವಾಗಿರುವ ಅತ್ಯುತ್ತಮ ಕೃಷಿ ವರದಿ, ವಿಡಂಬನಾತ್ಮಕ ಲೇಖನ, ಪುಟ ವಿನ್ಯಾಸ, ಕೋರ್ಟ್ ವರದಿ, ಸೇನಾ ವರದಿ, ತನಿಖಾ ವರದಿಗಳಿಗೆ ಪ್ರತ್ಯೇಕ ಪ್ರಶಸ್ತಿಗಳಿವೆ.

## ಕುಡಿಯುವ ನೀರಿಗೆ ಸಮಸ್ಯೆ ಇದ್ದಲ್ಲಿ ಸಹಾಯವಾಣಿ ಸಂಖ್ಯೆಗೆ ಕರೆ ಮಾಡಿ



ಬಳ್ಳಾರಿ: ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಮತ್ತು ಮೇವಿನ ಕೊರತೆ ಉಂಟಾದಲ್ಲಿ ಹಾಗೂ ಬೆಳೆ ಹಾನಿ ಪರಿಹಾರದ ಹಣ ಖಾತೆಗೆ ಜಮಾ ಆಗದೇ ಇರುವ ಬಗ್ಗೆ ದೂರುಗಳಿದ್ದಲ್ಲಿ ಸಾರ್ವಜನಿಕರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆರಂಭಿಸಲಾಗಿರುವ ಸಹಾಯವಾಣಿ ಸಂಖ್ಯೆ 1077 ಅಥವಾ 08392-277100 ಗೆ ಕರೆ ಮಾಡಿ ತಿಳಿಸಬಹುದು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಕೋರಿದ್ದಾರೆ.

2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬಳ್ಳಾರಿ ಜಿಲ್ಲೆಯ 5 ತಾಲ್ಲೂಕುಗಳನ್ನು (ಬಳ್ಳಾರಿ, ಸಂಡೂರು, ಸಿರುಗುಪ್ಪ, ಕುರುಗೋಡು ಮತ್ತು ಕಂಪ್ಲಿ) ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಿ ಆದೇಶಿಸಿದೆ. ಮುಂದಿನ ದಿನಗಳಲ್ಲಿ ಬರದ ತೀವ್ರತೆ ಹೆಚ್ಚಾಗುವ ಸಂಭವದಿರುವುದರಿಂದ ಈ ಸಮಸ್ಯೆಯನ್ನು ಎದುರಿಸಲು ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿಕೊಳ್ಳಲಾಗಿದ್ದು, ಕುಡಿಯುವ ನೀರು, ಮೇವಿನ ಕೊರತೆಯಾದಲ್ಲಿ ಸಹಾಯವಾಣಿ ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಗ್ರಾಮದಲ್ಲಿ ಜರುಗಿದ ಮತದಾನ ಜಾಗೃತಿ ಕಾರ್ಯಕ್ರಮ



ಧಾರವಾಡ: ಧಾರವಾಡ ತಾಲೂಕಿನ ಕೊಟಬಾಗಿ ಗ್ರಾಮ ಪಂಚಾಯತ್ ಮಟ್ಟದ ಸಂಜೀವಿನಿ ಮಹಿಳಾ ಒಕ್ಕೂಟ ಮತ್ತು ರೋಟರಿ ಕ್ಲಬ್ ವತಿಯಿಂದ ಗ್ರಾಮದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮವನ್ನು ಇತ್ತಿಚೆಗೆ ಹಮ್ಮಿಕೊಳ್ಳಲಾಗಿತ್ತು.

ಮತದಾನ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿದ ಜಿ.ಪಂ. ಸಿಇಓ ಸ್ವರೂಪ ಟಿ.ಕೆ. ಅವರು ಮಾತನಾಡಿ, ಪ್ರತಿಯೊಬ್ಬ ನಾಗರಿಕರು ಕಡ್ಡಾಯವಾಗಿ ಮತದಾನ ಮಾಡಬೇಕು ಮತ್ತು ಮತದಾನ ನಮ್ಮೆಲ್ಲರ ಹಕ್ಕು ಎಂದು ಅವರು ಹೇಳಿದರು.

ಮಹಿಳೆಯರು ಹೊಲಿಗೆ ತರಬೇತಿ, ಕಂಪ್ಯೂಟರ್ ತರಬೇತಿಯನ್ನು ಪಡೆದುಕೊಂಡು ಸ್ವಂತ ಜೀವನದ ಚಟುವಟಿಕೆಯನ್ನು ಮಾಡಬೇಕು ಮತ್ತು ಸ್ವಾವಲಂಬಿಯಾಗಿ ಜೀವನ ನಡೆಸಬೇಕು. ಮತ್ತು ಪ್ರತಿ ಮಹಿಳೆ ತನ್ನ ಕುಟುಂಬದ ಎಲ್ಲ ವಯಸ್ಕ ಮತದಾರರು ತಪ್ಪದೇ ಮತ ಚಲಾವಣೆ ಮಾಡುವಂತೆ ನೋಡಿಕೊಳ್ಳಬೇಕೆಂದು ಅವರು ಹೇಳಿದರು. ಇದೇ ಸಂದರ್ಭದಲ್ಲಿ ಹೊಲಿಗೆ, ಕಂಪ್ಯೂಟರ್ ತರಬೇತಿ ಕಾರ್ಯಕ್ರಮದ ಮುಕ್ತಾಯ ಸಮಾರಂಭವು ಜರುಗಿತು. ಕಾರ್ಯಕ್ರಮದಲ್ಲಿ ಸಹಾಯಕ ನಿರ್ದೇಶಕ ಚಂದ್ರು ಪೂಜಾರ, ಎನ್‌ಆರ್-ಎಲ್‌ಎಮ್ ನ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ವಿನೋದ್ ಕಂಠಿ, ಮತ್ತು ತಾಲೂಕ ಕಾರ್ಯಕ್ರಮ ವ್ಯವಸ್ಥಾಪಕ ಬಸವರಾಜ ಶೆಟ್ಟಪ್ಪನವರ, ವಲಯ ಮೇಲ್ವಿಚಾರಕ ರವಿಕುಮಾರ್ ಮಡಿವಾಳರ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಜಿಪಿ-ಎಲ್‌ಎಫ್ ನ ಅಧ್ಯಕ್ಷರು, ಪದಾಧಿಕಾರಿಗಳು, ಒಕ್ಕೂಟದ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕೈ ಗ್ಯಾರಂಟಿಯಿಂದ ಎಲ್ಲ ಧರ್ಮದ ಮಹಿಳೆಯರಿಗೆ ಅನುಕೂಲ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

ಗೋಕಾಕ: ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆ ಜಾರಿಗೆ ತಂದು ತಾನು ಕೊಟ್ಟ ಭರವಸೆ ಈಡೇರಿಸಿದೆ. ಈ ಯೋಜನೆಗಳಿಂದ ಎಲ್ಲ ಜಾತಿ ಹಾಗೂ ಧರ್ಮದ ಮಹಿಳೆಯರಿಗೆ ಅನುಕೂಲವಾಗಿದೆ ಎಂದು ಚಿಕ್ಕೋಡಿ ಲೋಕಸಭಾ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಹೇಳಿದರು.

ಗೋಕಾಕ ನಗರದ ಹಿಲ್ ಗಾರ್ಡನ್ ನಿವಾಸದಲ್ಲಿ ಚಿಕ್ಕೋಡಿ ಲೋಕಸಭೆ ವಿವಿಧಡೆಯಿಂದ ಆಗಮಿಸಿ ಮಹಿಳಾ ಸಂಘಟನೆಯ ಮುಖಂಡರು ಕಾರ್ಯಕರ್ತರನ್ನು ಭೇಟಿಯಾಗಿ ಪಕ್ಷ ಸಂಘಟನೆಯ ಕುರಿತು ಚರ್ಚಿಸಿ ನಂತರ ಮಾತನಾಡಿದ ಅವರು, ಕಾಂಗ್ರೆಸ್



ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಇಂದು ಪರಿಣಾಮಕಾರಿ ಅನುಷ್ಠಾನಗೊಂಡಿವೆ. ಹಾಗಾಗಿ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಖಚಿತವಾಗಲಿದೆ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಪರ ಅಲೆಯಿದ್ದು, ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬರಲಿದೆ. ಆದ್ದರಿಂದ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲು ನನಗೆ ಒಂದು ಭಾರಿ ಅವಕಾಶ ನೀಡಿಬೇಕು ಎಂದು ಮಹಿಳೆಯರಲ್ಲಿ ಮನವಿ ಮಾಡಿದರು.

ಶೈಕ್ಷಣಿಕ ಸೇರಿದಂತೆ ಕ್ರೀಡಾ ಪಟುಗಳಿಗೆ ಹಾಗೂ ಮಹಿಳೆಯರಿಗೆ ಸತೀಶ ಜಾರಕಿಹೊಳಿ ಫೌಂಡೇಶನ್ ದಿಂದ ಸಹಾಯ-ಸಹಕಾರ ಮಾಡಲಾಗಿದೆ. ನಿಮ್ಮ ಮನೆ ಮಗಳೆಂದು ಮತದಾರರು ಸಹಕರಿಸಬೇಕು. ಈ ಕ್ಷೇತ್ರದಿಂದ ಗೆಲ್ಲಲು ಶಕ್ತಿ ತುಂಬಬೇಕು ಎಂದ ಅವರು, ಬೇರುಮಟ್ಟದಿಂದ ಕಾಂಗ್ರೆಸ್ ಪಕ್ಷವನ್ನು ಬಲಪಡಿಸಲು ಮಹಿಳೆಯರು ಸಿದ್ದರಾಗಬೇಕು. ಈ ಭಾರಿ ಜಿಲ್ಲೆ ಸೇರಿದಂತೆ ದೇಶದ ಅಭಿವೃದ್ಧಿಗೆ ಕಾರಣವಾಗಿರುವ ಕಾಂಗ್ರೆಸ್ ಪಕ್ಷದ ಗೆಲುವಿಗೆ ಪಣತೊಟ್ಟು ನನ್ನ ಆಯ್ಕೆಗೆ ಮಹಿಳಾ ಮಣಿಗಳು ಮುಂದಾಗಬೇಕು ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ವಿವಿಧ ಗ್ರಾಮಗಳಿಂದ ಆಗಮಿಸಿದ ಮಹಿಳೆಯರು ಇದ್ದರು.

# ಬೃಹತ್ ಮೆರವಣಿಗೆ ಮೂಲಕ ಡಿ.ಕೆ.ಸುರೇಶ್ ನಾಮಪತ್ರ ಸಲ್ಲಿಕೆ

ರಾಮನಗರ: ಲೋಕಸಭಾ ಚುನಾವಣೆಗೆ ರಣಕಣ ರಂಗೇರಿದೆ. ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಡಿ.ಕೆ.ಸುರೇಶ್ ಗುರುವಾರ ಉಮೇದುವಾರಿಕೆ ಸಲ್ಲಿಸಿದ್ದಾರೆ.

ರಾಮನಗರದಲ್ಲಿ ಬೃಹತ್ ಮೆರವಣಿಗೆ ಹೊರಟು ನಾಮಪತ್ರ ಸಲ್ಲಿಸಿ ಶಕ್ತಿ ಪ್ರದರ್ಶಿಸಿದ್ದಾರೆ.

ನಾಮಪತ್ರ ಸಲ್ಲಿಕೆಗೂ ಮುನ್ನ ಮನೆದೇವರಿಗೆ ಡಿ.ಕೆ.ಸುರೇಶ್ ಪೂಜೆ ಸಲ್ಲಿಸಿದರು. ಬೆಳಗ್ಗೆ 9 ಗಂಟೆಗೆ ಕನಕಪುರದ ಕೆಂಕೆರಮ್ಮ ದೇವಾಲಯದಲ್ಲಿ



ಪೂಜೆ ಸಲ್ಲಿಸಿದರು. ನಂತರ ರಾಮನಗರದ ಚಾಮುಂಡೇಶ್ವರಿ ದೇವರ ದರ್ಶನ ಪಡೆದರು. ನಗರದ ಪ್ರಮುಖ ಮಸೀದಿ, ಚರ್ಚ್‌ಗೂ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದರು. ಜೊತೆಗೆ ಮನೆಯಲ್ಲಿ ಅಣ್ಣ ಡಿ.ಕೆ.ಶಿವಕುಮಾರ್ ಹಾಗೂ ಅತ್ತಿಗೆ ಕಾಲಿಗೆ ನಮಸ್ಕರಿಸಿ ಆಶೀರ್ವಾದ ಪಡೆದರು.

ರಾಮನಗರದ ಚಾಮುಂಡೇಶ್ವರಿ ದೇವಸ್ಥಾನದ ಮುಂದೆ ಡಿ.ಕೆ.ಸುರೇಶ್ ಬೆಂಬಲಿಗರು ಮತ್ತು ಕಾಂಗ್ರೆಸ್ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ್ದರು.

ತಮಟೆ, ವಾದ್ಯ, ಪಟ್ಟದ ಕುಣಿತ, ವೀರಗಾಸೆ ಮೂಲಕ ಡಿ.ಕೆ.ಶಿವಕುಮಾರ್ ಹಾಗೂ ಡಿ.ಕೆ.ಸುರೇಶ್‌ಗೆ ಸ್ವಾಗತ ಕೋರಿದರು.

ನಂತರ ಬೃಹತ್ ಮೆರವಣಿಗೆ ಹೊರಟರು. ಈ ವೇಳೆ ನೂರಾರು ಸಂಖ್ಯೆಯಲ್ಲಿ ಕಾರ್ಯಕರ್ತರು ಪಾಲ್ಗೊಂಡಿದ್ದರು. ಮೆರವಣಿಗೆಯಲ್ಲಿ ಡಿ.ಕೆ.ಸುರೇಶ್‌ಗೆ ಸಚಿವ ರಾಮಲಿಂಗಾರೆಡ್ಡಿ, ಎಂಎಲ್‌ಸಿ ರವಿ, ಕುಣಿಗಲ್ ಶಾಸಕ ರಂಗನಾಥ್, ಶಾಸಕ ಬಾಲಕೃಷ್ಣ ಸಾಥ್ ನೀಡಿದರು.

ಮೆರವಣಿಗೆ ಡಿಸಿ ಕಚೇರಿ ವರೆಗೂ ಸಾಗಿತು. ನಂತರ ಚುನಾವಣಾಧಿಕಾರಿ ಅವಿನಾಶ್ ಮೆನನ್ ರಾಜೇಂದ್ರಗೆ ಡಿ.ಕೆ.ಸುರೇಶ್ ಎರಡು ನಾಮಪತ್ರ ಸಲ್ಲಿಸಿದರು. ಕಾಂಗ್ರೆಸ್ ಅಭ್ಯರ್ಥಿಗೆ ಉಸ್ತುವಾರಿ ಸಚಿವ ರಾಮಲಿಂಗ ರೆಡ್ಡಿ, ಶಾಸಕ ಬಾಲಕೃಷ್ಣ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಗಂಗಾಧರ್, ಆನೇಕಲ್ ಶಾಸಕ ಶಿವಣ್ಣ ಸಾಥ್ ನೀಡಿದರು.

## ತೋಟಗಾರಿಕೆ ಇಲಾಖೆ: ವಿವಿಧ ಯೋಜನೆಗಳಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬಳ್ಳಾರಿ: ತೋಟಗಾರಿಕೆ ಇಲಾಖೆ ವತಿಯಿಂದ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಬೆಳೆಯುವ ರೈತ ಫಲಾನುಭವಿಗಳಿಗೆ 2024-25ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಸಹಾಯಧನ ಪಡೆಯಲು ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ತೋಟಗಾರಿಕೆ ಉಪನಿರ್ದೇಶಕ ಸಂತೋಷ್ ಸಪ್ಪಂಡಿ ಅವರು ತಿಳಿಸಿದ್ದಾರೆ.

ಯೋಜನೆಗಳು:

ಮಹಾತ್ಮಗಾಂಧಿ ರಾಷ್ಟೊಥಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ:

ಹೊಸ ಪ್ರದೇಶ ವಿಸ್ತರಣೆ ಕಾರ್ಯಕ್ರಮದಡಿ ಬಾಳೆ, ಅಂಜೂರ, ದಾಳಿಂಬೆ, ನುಗ್ಗೆ, ಪೇರಲ, ಪಪ್ಪಾಯ, ತೆಂಗು, ಫ್ರೂಟ್, ನೇರಳೆ, ಸಪೋಟ, ಮಾವು, ಸೀತಾಫಲ, ಹುಣಸೆ, ಕರಿಬೇವು ಮತ್ತು ಗುಲಾಬಿ ಹಾಗೂ ಇತರೆ ಬೆಳೆಗಳಿಗೆ ಮತ್ತು ಬದುಗಳಲ್ಲಿ ತೆಂಗು ಸಸಿ ನಾಟಿ, ಕೃಷಿ ಹೊಂಡ, ಬದುಗಳ ನಿರ್ಮಾಣ, ಕೊಳವೆ ಬಾವಿ ಮರುಪೂರಣ ಘಟಕಗಳಿಗೆ ಸಹಾಯಧನ ನೀಡಲಾಗುವುದು.

ರಾಷ್ಟೊಥಯ ತೋಟಗಾರಿಕೆ ಮಿಷನ್ ಯೋಜನೆ:

ಹೊಸ ಪ್ರದೇಶ ವಿಸ್ತರಣೆ, ಕೃಷಿಹೊಂಡ, ಈರುಳ್ಳಿ ಶೇಖರಣ ಘಟಕ, ನೆರಳುಪರದೆ, ಪ್ಯಾಕ್ ಹೌಸ್ ಮತ್ತು ತಳ್ಳುವ ಗಾಡಿ ವಿವಿಧ ಘಟಕಗಳಿಗೆ ಎಲ್ಲಾ ವರ್ಗದ ರೈತರಿಗೆ ಶೇ.50 ರಷ್ಟು ಲಭ್ಯತೆಯ ಮೇರೆಗೆ ಸಹಾಯಧನ ವಿತರಿಸಲಾಗುತ್ತದೆ.

ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ-ಹನಿ ನೀರಾವರಿ:

ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯ-ಹನಿ ನೀರಾವರಿ ಕಾರ್ಯಕ್ರಮದಡಿ ಸಹಾಯಧನವನ್ನು ನೀಡಲಾಗುತ್ತದೆ.

ಸಾಮಾನ್ಯ ವರ್ಗದ ರೈತರಿಗೆ ಹೊಸದಾಗಿ ಅಳವಡಿಸುವ ಫಲಾನುಭವಿಗಳಿಗೆ ಮಾತ್ರ ಶೇ.75 ರಂತೆ ಹಾಗೂ ಪ.ಜಾತಿ ಮತ್ತು ಪ.ಪಂಗಡ ಫಲಾನುಭವಿಗಳಿಗೆ ಶೇ.90 ರಂತೆ ಸಹಾಯಧನ ವಿತರಿಸಲಾಗುವುದು.

ಅಲ್ಪಸಂಖ್ಯಾತರಿಗೆ ಶೇ.15, ವಿಕಲಾಂಗಚೇತನರಿಗೆ ಶೇ.5 ಮತ್ತು ರೈತ ಮಹಿಳೆಯರಿಗೆ ಶೇ.33 ರಷ್ಟು ಅನುದಾನ ಮೀಸಲಿರಿಸಲಾಗಿದೆ.

ಆಸಕ್ತ ರೈತರು ಈ ಯೋಜನೆಗಳ ಸಹಾಯಧನ ಸೌಲಭ್ಯ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ತೋಟಗಾರಿಕೆ ಇಲಾಖೆ ಕಚೇರಿಗೆ ಸಂಪರ್ಕಿಸಿ, ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾಡಳಿತದಿಂದ ಸರಳ ಅಗ್ನಿ ಬನ್ನಿರಾಯ ಜಯಂತಿ ಆಚರಣೆ



ಬಳ್ಳಾರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಅಗ್ನಿ ಬನ್ನಿರಾಯ ಜಯಂತಿಯನ್ನು ಗುರುವಾರ ಸರಳವಾಗಿ ಆಚರಿಸಲಾಯಿತು.

ಲೋಕಸಭೆ ಸಾರ್ವತ್ರಿಕ ಚುನಾವಣೆ-2024ರ ಅಂಗವಾಗಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ನಗರದ ಡಾ.ರಾಜ್ಕುಮಾರ್ ರಸ್ತೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹೊಂಗಿರಣ ಸಭಾಂಗಣದಲ್ಲಿ ಅಗ್ನಿ ಬನ್ನಿರಾಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಸರಳ ಹಾಗೂ ಸಾಂಕೇತಿಕವಾಗಿ ಆಚರಣೆ ಮಾಡಲಾಯಿತು.

## ಜೆಎಸ್‌ಎಸ್ ಶಾಲೆ ಹಾಗೂ ಉಚಿತ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಅರ್ಜಿ ಆಹ್ವಾನ

ಬಳ್ಳಾರಿ: ಸುತ್ತೂರು ಶ್ರೀಕ್ಷೇತ್ರದ ಜೆಎಸ್‌ಎಸ್ ಶಾಲೆ ಹಾಗೂ ಉಚಿತ ವಿದ್ಯಾರ್ಥಿ ನಿಲಯದ 2024-25ನೇ ಸಾಲಿನ ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕನ್ನಡ ಮಾಧ್ಯಮಕ್ಕೆ 1 ರಿಂದ 8ನೇ ತರಗತಿವರೆಗೆ ಮತ್ತು ಇಂಗ್ಲೀಷ್ ಮಾಧ್ಯಮಕ್ಕೆ 1, 5 ಹಾಗೂ 8ನೇ ತರಗತಿಗಳಿಗೆ ಮಾತ್ರ ಪ್ರವೇಶಕ್ಕೆ ಅವಕಾಶವಿದೆ. ಗ್ರಾಮಾಂತರ ಪ್ರದೇಶದ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಬಾಲಕ ಹಾಗೂ ಬಾಲಕಿಯರಿಗೆ ಪ್ರವೇಶ ನೀಡಲಾಗುವುದು. ಅರ್ಜಿಯನ್ನು ಶಾಲಾ ಕಚೇರಿಯಲ್ಲಿ ಖುದ್ದಾಗಿ ಪಡೆಯಬಹುದು ಅಥವಾ www.jssschoolsuttur.org ಹಾಗೂ www.jssonline.org ವೆಬ್ಸೈಟ್ನಿಂದ ಡೌನ್ಲೋಡ್ ಮಾಡಿಕೊಳ್ಳಬಹುದು. ದೂರವಾಣಿಯಲ್ಲಿ ಸಂಪರ್ಕಿಸಿದರೆ ವಾಟ್ಸ್‌ಆಪ್ ಮೂಲಕವೂ ಅರ್ಜಿ ನಮೂನೆಯನ್ನು ಕಳುಹಿಸಿಕೊಡಲಾಗುವುದು.



ಅಂಚೆ ಮುಖಾಂತರ ಅರ್ಜಿ ಪಡೆಯಲು ಇಚ್ಚಿಸುವವರು, ವಿದ್ಯಾರ್ಥಿಯು ಪ್ರವೇಶ ಬಯಸುವ ತರಗತಿಯ ವಿವರ ಹಾಗೂ ಸ್ವ-ವಿಳಾಸವುಳ್ಳ 5 ರೂ.ಗಳ ಪೋಸ್ಟಲ್ ಸ್ಟ್ಯಾಂಪ್ ಹಚ್ಚಿದ ಲಕೋಟೆಯನ್ನು ಆಡಳಿತಾಧಿಕಾರಿಗಳು, ಜೆಎಸ್‌ಎಸ್ ಸಂಸ್ಥೆಗಳು, ಸುತ್ತೂರು-571129, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ. ಈ ವಿಳಾಸಕ್ಕೆ ಕಳುಹಿಸಿ ಪಡೆಯಬಹುದು. ಕ್ಯೂ.ಆರ್. ಕೋಡ್ ಮೂಲಕವು ಅರ್ಜಿಗಳನ್ನು ಡೌನ್ಲೋಡ್ ಮಾಡಿಕೊಳ್ಳಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ಮೇ 15ರ ಒಳಗಾಗಿ ಸಲ್ಲಿಸಬೇಕು. ಭರ್ತಿ ಮಾಡಿದ ಅರ್ಜಿಯ ಜೊತೆಗೆ ಹಿಂದಿನ ತರಗತಿಯ ಅಂಕಪಟ್ಟಿ, ಭಾವಚಿತ್ರ, ವಿದ್ಯಾರ್ಥಿ ಮತ್ತು ಪೋಷಕರ ಆಧಾರ್‌ಕಾರ್ಡ್, ರೇಷನ್‌ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಗಳನ್ನು ಲಗತ್ತಿಸಿ ಅಂಚೆ ಮುಖಾಂತರ ಆಡಳಿತಾಧಿಕಾರಿಗಳು, ಜೆ-ಎಸ್‌ಎಸ್ ಸಂಸ್ಥೆಗಳು, ಸುತ್ತೂರು-571129, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಈ ವಿಳಾಸಕ್ಕೆ ಕಳುಹಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೊ.7411486938 ಹಾಗೂ ಹಿರಿಯ ಪ್ರಾಥಮಿಕ ಶಾಲೆಯ ದೂ.08221-232054, ಪ್ರೌಢಶಾಲೆಯ ದೂ.08221-232653, ಬಸವೇಶ್ವರ ವಿದ್ಯಾರ್ಥಿನಿಲಯದ ದೂ.08221-232332, ಸಂಯೋಜನಾಧಿಕಾರಿಗಳ ಕಚೇರಿಯ ದೂ.08221-232217 ಗೆ ಸಂಪರ್ಕಿಸಬಹುದು ಎಂದು ಜೆಎಸ್‌ಎಸ್ ಶಾಲೆಯ ಆಡಳಿತಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ಕ್ಷಯರೋಗ ದಿನಾಚರಣೆ – 2024

# ಕ್ಷಯ ಮುಕ್ತ ದೇಶ ಮಾಡಲು ನಾವೆಲ್ಲರು ಶ್ರಮಿಸೋಣ: ಡಾ.ಎಸ್.ವ್ಹಿ. ಮುನ್ಯಾಳ

ಬೆಳಗಾವಿ: ಕ್ಷಯರೋಗ ನಿರ್ಮೂಲನೆಯಡಿಯಲ್ಲಿ ಸರ್ಕಾರವು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಅವುಗಳನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗೆ ಮುಟ್ಟಿಸಿ 2025 ನೇ ವೇಳೆಗೆ ಕ್ಷಯ ಮುಕ್ತ ಭಾರತ ಮಾಡಲು ಎಲ್ಲರೂ ಶ್ರಮಿಸಬೇಕು. ದೇಶದಿಂದ ಕ್ಷಯರ್ರೋಗವನ್ನು ನಿರ್ಮೂಲನೆ ಮಾಡುವ ಕಾರ್ಯ ಮಾಡೋಣ ಎಂದು ಆರೋಗ್ಯ & ಕುಟುಂಬ ಕಲ್ಯಾಣ ಸೇವಾ ವಿಭಾಗದ ಸಹ ನಿರ್ದೇಶಕರಾದ ಡಾ.ಎಸ್.ವ್ಹಿ. ಮುನ್ಯಾಳ ಹೇಳಿದರು.

ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ ಬೆಳಗಾವಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಕ್ಷಯರೋಗ ನಿಯಂತ್ರಣ ವಿಭಾಗ, ವೈದ್ಯಕೀಯ ವಿಜ್ಞಾನ ಸಂಸ್ಥೆ, ಜೆ.ಎನ್. ಎಂ.ಸಿ. ವೈದ್ಯಕೀಯ ಮಹಾವಿದ್ಯಾಲಯ, ನೈರುತ್ಯ ರೈಲ್ವೆ ವಲಯ (ಎಸ್‌ಡಬ್ಲ್ಯೂಆರ್), ತಾಲೂಕಾ ಆರೋಗ್ಯಾಧಿಕಾರಿಗಳ ಕಚೇರಿ ಹಾಗೂ ವಾರ್ತಾ ಮತ್ತು ಪ್ರಚಾರ ಇಲಾಖೆ ಬೆಳಗಾವಿ ಇವರ ಸಂಯುಕ್ತಾಶ್ರಯದಲ್ಲಿ ರೈಲ್ವೆ ಆರೋಗ್ಯ ಕೇಂದ್ರದಲ್ಲಿ ಬುಧವಾರ (ಮಾ.27) ರಂದು ಜಿಲ್ಲಾ ಮಟ್ಟದ ವಿಶ್ವ ಕ್ಷಯರೋಗ ದಿನಾಚರಣೆಯಲ್ಲಿ ಮಾತನಾಡಿದರು.

ಬಿಮ್ಸ್ ಆಸ್ಪತ್ರೆ ವಿಭಾಗದ ಮುಖ್ಯಸ್ಥರು ಹಾಗೂ ಕ್ಷಯ & ಶಾಸ್ವಕೋಶ ತಜ್ಞರಾದ ಡಾ. ಗಿರೀಶ ದಂಡಗಿ ಅವರು ಮಾತನಾಡಿ, ಕ್ಷಯರೋಗಾಣುವು ತನ್ನ ಜೈವಿಕ ರಚನೆಯಲ್ಲಿ ಬದಲಾವಣೆ ತಂದುಕೊಂಡು ತನ್ನ ಅಸ್ತಿತ್ವವನ್ನು ಇನ್ನಷ್ಟು ಬಲಪಡಿಸಿಕೊಳ್ಳಲು ಪ್ರಯತ್ನಿಸುತ್ತಿದ್ದು, ನಾವು ಆದಷ್ಟು ಬೇಗ ಎಚ್ಚೆತ್ತುಕೊಳ್ಳದಿದ್ದರೇ ಮತ್ತೆ ನಮ್ಮ ಮೇಲೆ ತನ್ನ ಪ್ರಭಾವವನ್ನು ಬೀರಲಿದೆ. ಆದ್ದರಿಂದ ಕ್ಷಯರೋಗವಿದೆ ಎಂದು ದೃಡಪಟ್ಟ ಎಲ್ಲ ಕ್ಷಯ ರೋಗಿಗಳು ಹಾಗೂ ರೋಗಿಯ ಸಂಪರ್ಕಿತರು ತಮ್ಮನ್ನು ಪರೀಕ್ಷಿಸಿಕೊಂಡು ಕ್ಷಯವಿಲ್ಲವೆಂದು ದೃಡಪಟ್ಟ ನಂತರ ಕ್ಷಯ ಭಾದಿತರಾಗಬಾರದೆಂದು ಕ್ಷಯ ತಡೆಗಟ್ಟುವ ಚಿಕಿತ್ಸೆಯನ್ನು ಪಡೆದಲ್ಲಿ ಈ ರೋಗವನ್ನು ಸಂಪೂರ್ಣವಾಗಿ ನಿಯಂತ್ರಿಸಬಹುದು ಎಂದು ಸಲಹೆ ನೀಡಿದರು.

ಬಿಮ್ಸ್ ಆಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕರು ಡಾ. ವ್ಹಿ. ವ್ಹಿ ಶಿಂಧೆ ಅವರು ಮಾತನಾಡಿ,



ಕ್ಷಯ ಮುಕ್ತ ಜಿಲ್ಲೆಯನ್ನಾಗಿಸುವ ದೃಷ್ಟಿಯಿಂದ ಬಿಮ್ಸ್ ಆಸ್ಪತ್ರೆಯಿಂದ ಎಲ್ಲ ಸಹಾಯ ಸಹಕಾರವನ್ನು ನೀಡುವುದಾಗಿ ತಿಳಿಸಿ, ಕ್ಷಯರೋಗ ನಿರ್ಮೂಲನೆಯತ್ತ ಬೆಳಗಾವಿ ಜಿಲ್ಲೆ ಮುನ್ನಡೆಯುತ್ತಿದ್ದು, ಈಗಾಗಲೇ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ಕ್ಷಯರೋಗ ಪತ್ತೆಗೆ ಅವಶ್ಯವಿರುವ ಅತ್ಯಾಧುನಿಕ ಸೌಲಭ್ಯಗಳಾದ ಸಿಬಿನ್ಯಾಟ್, ಟ್ರೂನ್ಯಾಟ, ಸಿಟಿಸ್ಕಾನ್ ಎಂ.ಆರ್.ಐ. ಸೌಲಭ್ಯವನ್ನು ಒದಗಿಸಲಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಂಡು ಕ್ಷಯಮುಕ್ತ ರಾಗುವಂತೆ ಕರೆ ನೀಡಿದರು.

ಚಿಕ್ಕೋಡಿಯ ಅಪರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಡಾ. ಎಸ್. ಎಸ್. ಗಡೇದ ಅವರು ಮಾತನಾಡಿ, ಕ್ಷಯರೋಗ ನಿಯಂತ್ರಣದಲ್ಲಿ ಕ್ಷಯರೋಗ ಪತ್ತೆಯು ಅತೀ ಪ್ರಮುಖವಾದ ಘಟ್ಟವಾಗಿದ್ದು ಕ್ಷಯರೋಗದ ಲಕ್ಷಣಗಳು ಕಂಡು ಬಂದ ತಕ್ಷಣ ಎಲ್ಲರೂ ಸಮೀಪದ ಆಸ್ಪತ್ರೆಗೆ ಭೆಟ್ಟಿನೀಡಿ ಪರೀಕ್ಷಿಸಿಕೊಳ್ಳಲು ತಿಳಿಸಿದರು. ನಮ್ಮ ಅಲ್ಪ ನಿರ್ಲಕ್ಷತೆಯು ಕೂಡ ಬಾರಿ ಅನಾಹುತಕ್ಕೆ ಕಾರಣವಾಗಬಹುದಾಗಿದ್ದು ಎಲ್ಲರೂ ಕ್ಷಯರೋಗದ ಕುರಿತು ಜಾಗೃತಿ ಮೂಡಿಸಿಕೊಂಡು ತಮ್ಮ ಕುಟುಂಬ ಹಾಗೂ ಗ್ರಾಮವನ್ನು ಈ ರೋಗದಿಂದ ಮುಕ್ತಗೊಳಿಸಲು ಕರೆ ನೀಡಿದರು.

ರೈಲ್ವೆ ಆರೋಗ್ಯ ಕೇಂದ್ರದ ಸಹಾಯಕ ಮುಖ್ಯ ವೈದ್ಯಕೀಯ ಅಧೀಕ್ಷಕರು ಡಾ. ಶ್ರೀಶೈಲ ಪಡಸಲಗಿ ಅವರು ಮಾತನಾಡಿ, ರೈಲ್ವೆ ಇಲಾಖೆಯಲ್ಲಿ ಇಂದಿನ ಕಾರ್ಯಕ್ರಮವು ಒಂದು ವಿಭೀನ್ನ ಕಾರ್ಯಕ್ರಮವಾಗಿದ್ದು, ರೈಲ್ವೆ ಇಲಾಖೆಯ ಸಿಬ್ಬಂದಿ ಹಾಗೂ ಕಾರ್ಮಿಕರಿಗೆ ಕ್ಷಯರೋಗ ಕುರಿತು ಅರಿವು ಮೂಡಿಸಲಾಗಿದ್ದು, ಕಾರ್ಮಿಕರಲ್ಲಿ ಕ್ಷಯರೋಗ ನಿಯಂತ್ರಣಕ್ಕಾಗಿ ಇರುವ ಮುಂಜಾಗ್ರತಾ ಕ್ರಮಗಳ ಬಗ್ಗೆ ವಿವರಿಸಿ ಕರ್ತವ್ಯದ ಸಮಯಲ್ಲಿ ಮಾಸ್ಕ ಬಳಕೆ, ಕೈ ಗವಚ ಬಳಸುವುದು ಹಾಗೂ ಪ್ರತಿದಿನ ಪೌಷ್ಟಿಕ ಆಹಾರ ಸೇವನೆ ಮಾಡಿ ತಮ್ಮ ಆರೋಗ್ಯ ಕಾಯ್ದಿಕೊಳ್ಳಲು ಕರೆ ನೀಡಿದರು.

ಈ ವೇಳೆ ರೈಲ್ವೆ ಇಲಾಖೆಯ ಕಾರ್ಮಿಕರಿಗೆ ವಿಶ್ವ ಕ್ಷಯರೋಗ ದಿನಾಚರಣೆ ಅಂಗವಾಗಿ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಬೆಳಗಾವಿಯ ನೈರುತ್ಯ ರೈಲ್ವೆ ವಲಯದ ಸಹಾಯಕ ವಿಭಾಗೀಯ ಅಭಿಯಂತರಾದ ಮಹೇಶ ಬಾರ್ಲೆ, ಬೆಳಗಾವಿ ತಾಲೂಕಾ ಆರೋಗ್ಯಾಧಿಕಾರಿಗಳು ಡಾ.ಸಂಜಯ ಡುಮ್ಮಗೋಳ, ವೈದ್ಯಾಧಿಕಾರಿ ಡಾ.ಬಿ. ಎನ್. ತುಕ್ಕಾರ, ಎನ್.ಟಿ.ಇ.ಪಿ. ವೈದ್ಯಾಧಿಕಾರಿಗಳು ಬಿಮ್ಸ್ ಬೆಳಗಾವಿ ಡಾ.ಜೆ. ಎ. ನಾಗಲೀಕರ, ವೈದ್ಯಾಧಿಕಾರಿಗಳು ಡಾ. ರಮೇಶ ನಿರಗಟ್ಟಿ, ಡಾ. ಕಿರಣ ಪೂಜಾರ, ಡಾ. ನಿಂಗಪ್ಪ ಡಾ. ಚಾಂದ ದೇವಡಿ, ರೈಲ್ವೆ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗ, ಕಾರ್ಮಿಕರು, ಜಿಲ್ಲಾ ಕ್ಷಯರೋಗ ನಿಯಂತ್ರಣ ಕೇಂದ್ರದ ಹಾಗೂ ತಾಲೂಕಾ ಆರೋಗ್ಯ ಕಚೇರಿಯ ಎಲ್ಲಾ ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯವರು ಹಾಗೂ ಆರೋಗ್ಯ ಕಾರ್ಯಕರ್ತರು, ಕೆ. ಹೆಚ್.ಪಿ.ಟಿ., ಎನ್.ಜಿ.ಓ.ಗಳು ಹಾಗೂ ಮಾಧ್ಯಮ ಮಿತ್ರರು ಉಪಸ್ಥಿತರಿದ್ದರು.

## ಗುಡ್‌ಫ್ರೈಡೆ ಪ್ರಯುಕ್ತ ಹೆಚ್ಚುವರಿ ಸಾರಿಗೆ ಸೌಲಭ್ಯ

ಬೆಳಗಾವಿ: 2024 ನೇ ಸಾಲಿನ ಗುಡ್‌ಫ್ರೈಡೆಯ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ, ವಾ.ಕ.ರ.ಸಾ.ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 100 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ಮಾ.30 ಮತ್ತು 31 (ಶನಿವಾರ ಮತ್ತು ಭಾನುವಾರ) ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು.

ಬೆಂಗಳೂರಿನಿಂದ ರಾಜ್ಯ ಅಥವಾ ಅಂತರರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಮಾ.28 ರಿಂದ ಮಾ.30 ರವರೆಗೆ ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ರಜೆ ಮುಗಿದ ಮೇಲೆ ಮಾ.31 ನಂತರದ ದಿನಗಳಂದು ಪ್ರಮುಖ ಸ್ಥಳಗಳಿಂದ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು. ಸದರಿ ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ಹುಬ್ಬಳ್ಳಿಯ ವಾಕರಸಾ.ಸಂಸ್ಥೆ, ಕೇಂದ್ರ ಕಛೇರಿ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದೆ.

## ಉತ್ತರ ಕರ್ನಾಟಕ ಭಾಗದಲ್ಲಿ ಉಷ್ಣ ಅಲೆಯ ಎಚ್ಚರಿಕೆ

ಬೆಳಗಾವಿ: ಭಾರತೀಯ ಹವಾಮಾನ ಇಲಾಖೆಯು ಮುಂದಿನ 5 ದಿನಗಳ ಕಾಲ ಉತ್ತರ ಕರ್ನಾಟಕ ಭಾಗದಲ್ಲಿ ಉಷ್ಣ ಅಲೆಯ ಎಚ್ಚರಿಕೆ ನೀಡಿದೆ.

ಮುಂದಿನ 5 ದಿನಗಳಲ್ಲಿ ಉತ್ತರ ಕರ್ನಾಟಕದ ಬಹಳಷ್ಟು ಸ್ಥಾನಗಳಲ್ಲಿ ತಾಪಮಾನವು 2 ರಿಂದ 3 ಡಿಗ್ರಿ ಸೆಲ್ಸಿಯಸ್‌ನಷ್ಟು ಏರಿಕೆಯಾಗಬಹುದೆಂದು ಹವಾಮಾನ ಇಲಾಖೆ ಹೇಳಿದೆ. ಜನರು ಹಗಲು ಸಮಯದಲ್ಲಿ ಸಾಧ್ಯವಾದಷ್ಟು ಮನೆಯಲ್ಲಿಯೇ ಇರಬೇಕು, ಜನರು ಮನೆಯಿಂದ ಹೊರಗೆ ಹೋದಾಗಲೆಲ್ಲಾ ನೀರು ಅಥವಾ ದ್ರವ ಪದಾರ್ಥಗಳನ್ನು ತಮ್ಮೊಂದಿಗೆ ಒಯ್ಯುವಂತೆ ಹವಾಮಾನ ಇಲಾಖೆ ಅಧಿಕಾರಿಗಳು ಸಲಗೆ ನೀಡಿದ್ದಾರೆ..

ಬಳ್ಳಾರಿ, ವಿಜಯನಗರ, ಬಾಗಲಕೋಟೆ, ಕಲಬುರಗಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ತಾಪಮಾನವು ಸಾಮಾನ್ಯಕ್ಕಿಂತ 2 ರಿಂದ 3 ಡಿಗ್ರಿ ಸೆಲ್ಸಿಯಸ್ ಏರಿಕೆಯಾಗಲಿದೆ ಎಂದು ಐಎಂಡಿ ವಿಜ್ಞಾನಿ ಎ ಪ್ರಸಾದ್ TNIE ಗೆ ತಿಳಿಸಿದ್ದಾರೆ. IMD ವರದಿ ಪ್ರಕಾರ, ತುಮಕೂರು, ಬಾಗಲಕೋಟೆ ಮತ್ತು ಚಿತ್ರದುರ್ಗದ ಕೆಲವು ಭಾಗಗಳಲ್ಲಿ ತಾಪಮಾನವು 3.1– 5 ಡಿಗ್ರಿ ಸೆಲ್ಸಿಯಸ್ ಮತ್ತು ಮಂಡ್ಯ, ದಾವಣಗೆರೆ, ಬಳ್ಳಾರಿ ಮತ್ತು ಕೊಪ್ಪಳದಲ್ಲಿ 1.6– 6 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗಿದೆ. ಏಪ್ರಿಲ್‌ನಲ್ಲಿ ತಾಪಮಾನವು ಮಾರ್ಚ್‌ಗಿಂತ ಹೆಚ್ಚಾಗಿರುತ್ತದೆ.

## ಅಪರಿಚಿತ ಮಹಿಳೆಯ ಶವ ಪತ್ತೆ; ವಾರಸ್ಸುದಾರರ ಪತ್ತೆಗೆ ಮನವಿ

ಶಿವಮೊಗ್ಗ: ಫೆ.29 ರಂದು ದೊಡ್ಡಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯ ಸರ್ಕಾರಿ ಬಸ್ ನಿಲ್ದಾಣದಲ್ಲಿ ಅನಾರೋಗ್ಯದಿಂದ ಸುಸ್ತಾಗಿ ಮಲಗಿದ್ದ ಸುಮಾರು 55–60 ವರ್ಷದ ಮಹಿಳೆಯನ್ನು ಚಿಕಿತ್ಸೆಗಾಗಿ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಫಲಕಾರಿಯಾಗಿದೆ.

ಮಾ.20 ರಂದು ಮೃತಪಟ್ಟಿರುತ್ತಾಳೆ. ಶವವನ್ನು ಮೆಗ್ಗಾನ್ ಆಸ್ಪತ್ರೆಯ ಶವಾಗಾರದಲ್ಲಿರಿಸಲಾಗಿದೆ. ಈಕೆಯ ಚಹರೆ ಸುಮಾರು 05.04 ಅಡಿ ಎತ್ತರ, ಸಾಧಾರಣ ಮೈಕಟ್ಟು, ಕೋಲುಮುಖ ಹೊಂದಿದ್ದು, ಮೃತಳ ಮೈಮೇಲೆ ತಿಳಿ ಹಸಿರು ಬಣ್ಣದ ನೈಟಿ ಧರಿಸಿರುತ್ತಾರೆ. ಮೃತಳ ಬಲಗೈನ ಮುಂಗೈ ಒಳಭಾಗದಲ್ಲಿ 3 ಹೂಗಳ ಹಚ್ಚೆ ಗುರುತು ಹಾಗೂ ಎಡಗೈ ಮುಂಗೈ ಒಳಭಾಗದಲ್ಲಿ 1 ಹೂವಿನ ಹಚ್ಚೆ ಗುರುತು ಮತ್ತು 3 ಇಂಚು ಅಗಲದ ಸುಟ್ಟ ಗಾಯದ ಕಲೆ ಇರುತ್ತದೆ.

ಈ ಮೃತಳ ವಾರಸ್ಸುದಾರರು ಅಥವಾ ವಿಳಾಸ ಪತ್ತೆಯಾಗಿರುವುದಿಲ್ಲ. ಈ ಮಹಿಳೆಯ ವಾರಸ್ಸುದಾರರು ಪತ್ತೆಯಾದಲ್ಲಿ ದೊಡ್ಡಪೇಟೆ ಪೊಲೀಸ್ ಠಾಣೆ ದೂ.ಸಂ.: 08182–261414 / 9611761255 ಗಳನ್ನು ಸಂಪರ್ಕಿಸಿ ಮಾಹಿತಿ ನೀಡುವಂತೆ ಪೊಲೀಸ್ ಇನ್ಸ್ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಆಮಿಷಕ್ಕೆ ಒಳಗಾಗದೆ ನೈತಿಕ ಮತದಾನ ಮಾಡಿ: ಜಿಪಂ ಉಪಕಾರ್ಯದರ್ಶಿ ರೇಖಾ ಡೊಳ್ಳಿನವರ

ಹುಕ್ಕೇರಿ: ವಿಶ್ವದಲ್ಲಿಯೇ ಅತಿ ದೊಡ್ಡ ಚುನಾವಣೆಯೆಂದರೆ ಅದು ನಮ್ಮ ಲೋಕಸಭೆ ಚುನಾವಣೆ. ಇಂತಹ ಚುನಾವಣೆಯಲ್ಲಿ ಪ್ರತಿಯೊಬ್ಬ ಮತದಾರರು ಯಾವುದೇ ಆಸೆ–ಆಮಿಷಕ್ಕೆ ಒಳಗಾಗದೆ ನೈತಿಕ ಮತದಾನ ಮಾಡಲು ಮುಂದಾಗಬೇಕು ಎಂದು ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿಯೂ ಆದ ಸಹಾಯಕ ಚುನಾವಣಾಧಿಕಾರಿ ರೇಖಾ ಡೊಳ್ಳಿನವರ ಹೇಳಿದರು.

ಲೋಕಸಭೆ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಪಟ್ಟಣದಲ್ಲಿ ಗುರುವಾರ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ತಾಲೂಕು ಸ್ವೀಪ್ ಸಮಿತಿಯು ಮತದಾನ ಜಾಗೃತಿಗೆ ಏರ್ಪಡಿಸಿದ ಬೈಕ್ ರ್‍ಯಾಲಿಗೆ ಚಾಲನೆ ನೀಡಿ ಮಾತನಾಡಿದ ಅವರು, ಉತ್ತಮ ಪ್ರಜಾಪ್ರಭುತ್ವ ನಿರ್ಮಿಸಲು ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದರು.

ಮತದಾರರಿಗೆ ಯಾವುದೇ ರೀತಿಯ ದೂರು ಹಾಗೂ ದುಷ್ಕೃತ್ಯಗಳು ಕಂಡು ಬಂದಲ್ಲಿ ಸಿ–ವಿಜಿಲ್ ಆ್ಯಪ್ ಮೂಲಕ ಚುನಾವಣಾ ಆಯೋಗಕ್ಕೆ ತಿಳಿಸಲು ಅವಕಾಶವಿದೆ. ಮತದಾನ ದಿನದಂದು ಸಮಯ ವ್ಯರ್ಥ ಮಾಡದೇ ಮತದಾನ ಮಾಡಿ ಸುಭದ್ರ ದೇಶ ನಿರ್ಮಿಸಬೇಕು ಎಂದು ಅವರು ಹೇಳಿದರು.




ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಟಿ.ಆರ್.ಮಲ್ಲಾಡದ ಅಧ್ಯಕ್ಷತೆ ವಹಿಸಿದ್ದರು. ವಿಕಲಚೇತನರು ಮತದಾನ ಜಾಗೃತಿ ಕುರಿತಾದ ಭಿತ್ತಿ ಪತ್ರ, ಫಲಕಗಳ ಪ್ರದರ್ಶಿಸಿ ಗಮನ ಸೆಳೆದರು. ಇದೇ ವೇಳೆ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ರಸ್ತೆಯುದ್ದಕ್ಕೂ ಚುನಾವಣಾ ಪರ್ವ ದೇಶದ ಗರ್ವ ಘೋಷವಾಕ್ಯಗಳನ್ನು ಮೊಳಗಿಸಿ ಮತದಾನದ ಜಾಗೃತಿ ಮೂಡಿಸಲಾಯಿತು.

ಪುರಸಭೆ ಮುಖ್ಯಾಧಿಕಾರಿ ಶಂಭುಲಿಂಗ ಕನ್ನೆ, ತಾಪಂ ಯೋಜನಾಧಿಕಾರಿ ಪ್ರಶಾಂತ ಮುನ್ನೊಳಿ, ವ್ಯವಸ್ಥಾಪಕ ಅವಿನಾಶ ಹೊಳೆಪ್ಪಗೋಳ, ಸಹಾಯಕ ನಿರ್ದೇಶಕರಾದ ರಾಜು ಢಾಂಗೆ, ಲೆಕ್ಕ ವಿಭಾಗದ ಮುಖ್ಯಸ್ಥ ರಾಜು ವಂಜೀರೆ, ವಸತಿ ಯೋಜನೆಯ ಶಂಕರ ಕಾಂಬಳೆ, ಮಹಾಂತೇಶ ನಾಯಿಕ, ವಿಶ್ವನಾಥ ಹಿರೇಮಠ, ಶಿವಕುಮಾರ ನಾಯಿಕ, ದೇವಾನಂದ ನವಲೆ, ರಾಘವೇಂದ್ರ ಭರಮನ್ನವರ, ಪಿಡಿಓಗಳಾದ ಪಿ.ಆರ್.ನೇರ್ಲಿ, ಶೀಲಾ ತಳವಾರ, ನಿರಂಜನ ಕುರಬೇಟ, ಎಂಐಎಸ್ ಸಂಯೋಜಕ ಶಂಕರ ಶಿರಗುಪ್ಪಿ, ತಾಂತ್ರಿಕ ಸಂಯೋಜಕ ಅರ್ಷದ ನೇರ್ಲಿ, ಐಇಸಿ ತಾಲೂಕಾ ಸಂಯೋಜಕ ಮಹಾಂತೇಶ ಬಾದವನಮಠ ಮತ್ತಿತರರು ಉಪಸ್ಥಿತರಿದ್ದರು.

## ಅಭಿವೃದ್ಧಿಗೆ ಕೈ ಪಕ್ಷಕ್ಕೆ ಮತ ನೀಡಿ: ಯುವ ನಾಯಕ ರಾಹುಲ್ ಜಾರಕಿಹೊಳಿ



ಬೆಳಗಾವಿ: ಮೇ 7 ರಂದು ನಡೆಯುವ ಮತದಾನದಲ್ಲಿ ಅತೀ ಹೆಚ್ಚು ಮತಗಳನ್ನು ಕಾಂಗ್ರೆಸ್ ಪಕ್ಷಕ್ಕೆ ನೀಡಿ ನಮ್ಮ ಸಹೋದರಿ ಗೆಲ್ಲುವಂತೆ ಮಾಡಲು ಕಾರ್ಯಕರ್ತರು ಹಾರೈಸಬೇಕೆಂದು ಮತದಾರರಲ್ಲಿ ಯುವ ನಾಯಕ ರಾಹುಲ್ ಜಾರಕಿಹೊಳಿ ವಿನಂತಿಸಿದರು.

ಚಿಕ್ಕೋಡಿ ಲೋಕಸಭಾ ಚುನಾವಣೆ ನಿಮಿತ್ಯ ರಾಯಬಾಗ ವಿಧಾನಸಭಾ ಕ್ಷೇತ್ರದ ನಿಪನಾಳ, ಮಂಟೂರ, ಬೆಂಡವಾಡ ಜೋಡಟ್ಟಿ ಗ್ರಾಮದಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಿಮ್ಮ ಮನೆಯ ಮಗಳಾದ ಪ್ರಿಯಂಕಾ ಜಾರಕಿಹೊಳಿ ಅವರು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯಾರ್ಥಿಯಾಗಿ ಸ್ಪರ್ಧಿಸುತ್ತಿದ್ದು, ತಾವೆಲ್ಲರೂ ಆಶೀರ್ವಾದ ಮಾಡಬೇಕು ಎಂದ ಅವರು. “ನಮ್ಮ ಸರ್ಕಾರ ಬಡವರ ಪರವಾಗಿದ್ದು, ರೈತರ ಬಗ್ಗೆ ಅಪಾರ ಕಾಳಜಿ ಹೊಂದಿದೆ. ಅಧಿಕಾರಕ್ಕೆ ಬಂದ 9 ತಿಂಗಳಲ್ಲೇ ಘೋಷಿಸಿದ್ದ ಎಲ್ಲಾ ಐದು ಗ್ಯಾರಂಟಿಗಳನ್ನು ಜಾರಿಗೆ ತಂದಿದೆ, ಇದು ನಮ್ಮ ಸರ್ಕಾರದ ಹೆಗ್ಗಳಿಕೆಯಾಗಿದೆ” ಎಂದರು.

ಕಾಂಗ್ರೆಸ್ ಯಾವಾಗಲೂ ಎಲ್ಲಾ ಸಮುದಾಯಗಳನ್ನು ಒಟ್ಟಿಗೆ ತೆಗೆದುಕೊಂಡು ವಿವಿಧ ಸಮುದಾಯಗಳು ಮತ್ತು ಧಾರ್ಮಿಕ ಗುಂಪುಗಳಿಗೆ ಸಮಾನ ಅವಕಾಶವನ್ನು ಖಚಿತಪಡಿಸಿಕೊಳ್ಳಲು ಶ್ರಮಿಸುತ್ತಿದೆ. ಇದು ನಿರಂತರವಾಗಿ ಸಮಾಜವನ್ನು ಧಾರ್ಮಿಕ ಮತ್ತು ಜಾತಿಯ ಆಧಾರದ ಮೇಲೆ ವಿಭಜಿಸುವ ಬಿಜೆಪಿಗೆ ವ್ಯತಿರಿಕ್ತವಾಗಿದೆ ಎಂದು ಅವರು ಹೇಳಿದರು.

ಇದಕ್ಕೂ ಮೊದಲು ನಿಪನಾಳ ಗ್ರಾಮಕ್ಕೆ ಆಗಮಿಸಿದ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರನ್ನು ಗ್ರಾಮದ ಮಹಿಳೆಯರು ಆರತಿ ಎತ್ತಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಮಹಾವೀರ ಮೋಹಿತೆ, ಅಪ್ಪಾಬ ಕುಲಗೋಡ, ಅಬ್ಲುಲ್ಸತ್ತಾರ ಮುಲ್ಲಾ, ಡಾ. ಎಸ್. ಎ. ಮಗದುಮ್ಮ, ದಲೀಪ ಜಮಾದಾರ, ನಾಮದೇವ ಕಾಂಬಳೆ, ರಾಜು ಕೋಟಗಿ, ಶ್ರವಣ ಕಾಂಬಳೆ, ಅರ್ಜುನ ಬಂಡಿಗಾರ ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಪತ್ನಿಯನ್ನು ಮಚ್ಚಿನಿಂದ ಕೊಚ್ಚಿ ಹತ್ಯೆಗೈದ ಪತಿ




ಬೆಂಗಳೂರು: ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ಪತ್ನಿಯನ್ನೇ ಭೀಕರವಾಗಿ ಕೊಲೆಗೈದು ನಂತರ ಪತಿ ತಾನು ಕೂಡ ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ಬೆಂಗಳೂರು ನಗರದ ಆನೇಕಲ್ ತಾಲೂಕಿನ ಜಿಗಣಿ ಟೌನಲ್ಲಿ ನಡೆದಿದೆ.

ಪತಿ ಮುಬಾರಕ್(28) ಎಂಬಾತ ಪತ್ನಿ ಅರ್ಬಿಯಾ ತಾಜ್(24) ಅವರನ್ನು ಮಚ್ಚಿನಿಂದ ಕೊಚ್ಚಿ ಹತ್ಯೆ ಮಾಡಿದ್ದಾನೆ. ಪ್ರತಿದಿನ ಕಲಹ ಜಗಳ ಗಲಾಟೆ ನಡೆಯುತ್ತಿದ್ದೋಗಿದರಿಂದ ಬೇಸತ್ತ ಪತ್ನಿ ಅರ್ಬಿಯಾ ತಾಜ್ ಇತ್ತೀಚೆಗೆ ತವರು ಮನೆ ಸೇರಿಕೊಂಡಿದ್ದಳು ಎಂದು ಹೇಳಲಾಗುತ್ತಿದೆ.

ವಾರದ ಹಿಂದೆಯಷ್ಟೇ ಪತ್ನಿ ಮನೆಗೆ ಬಂದಿದ್ದ ಆರೋಪಿ ಪತಿ ಮುಬಾರಕ್, ಅರ್ಬಿಯಾ ತಾಜ್ಳನ್ನು ಮನೆಗೆ ಬರಲು ಕರೆದಿದ್ದಾನೆ. ಆದರೆ, ಗಂಡನ ಮನೆಗೆ ಹೋಗಲು ಪತ್ನಿ ಹಿಂದೇಟು ಹಾಕಿದ್ದಾಳೆ. ಬಳಿಕ ಮುಬಾರಕ್ ಹಾಗೆಯೇ ಹೋಗಿದ್ದ. ಇಂದು ವಾಪಸ್ ತನ್ನ ಮನೆಗೆ ಬರುವಂತೆ ಪತಿ ಬಂದು ಒತ್ತಾಯಿಸಿದ್ದಾನೆ. ಮತ್ತೆ ಬರಲು ನಕಾರ ಮಾಡಿದ ಹಿನ್ನೆಲೆ ಪತ್ನಿಯನ್ನ ಮಾರಕಾಸ್ತ್ರದಿಂದ ಕೊಲೆಗೈದಿದ್ದಾನೆ.

ಇನ್ನು ಪತ್ನಿ ಅರ್ಬಿಯಾ ತಾಜ್ಳನ್ನ ಮಚ್ಚಿನಿಂದ ಹಲ್ಲೆ ಮಾಡಿದೊಡನೆ ಕೂಗಾಡಿದ್ದಾಳೆ. ಇದನ್ನು ಕೇಳಿದ ತಕ್ಷಣ ಮೃತ ಮಹಿಳೆ ತಾಯಿ ನೆರವಿಗೆ ಧಾವಿಸಿದ್ದಾಳೆ. ಈ ವೇಳೆ ಪತಿ ಮುಬಾರಕ್ ಬಾಗಿಲು ಲಾಕ್ ಮಾಡಿ ಆತ್ಮಹತ್ಯೆ ಯತ್ನಿಸಿದ್ದಾನೆ. ಕೂಡಲೇ ಆತನನ್ನು ಖಾಸಗಿ ಆಸ್ಪತ್ರೆಗೆ ಸೇರಿಸಿ ಚಿಕಿತ್ಸೆ ನೀಡಲಾಗುತ್ತಿದೆ. ವಿಷಯ ತಿಳಿದು ಸ್ಥಳಕ್ಕೆ ಜಿಗಣಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಕಾರಂಜಿಮಠದಲ್ಲಿ 273ನೇ ಶಿವಾನುಭವ ಕಾರ್ಯಕ್ರಮ

ಬೆಳಗಾವಿ ಶಿವಬಸವನಗರ ಕಾರಂಜಿಮಠದ ಶಿವಾನುಭವ ಮಂಟಪದಲ್ಲಿ 273ನೇ ಶಿವಾನುಭವ ಕಾರ್ಯಕ್ರಮವು ದಿನಾಂಕ 1 ಏಪ್ರಿಲ್ 2024ರಂದು ಸಾಯಂಕಾಲ 6 ಗಂಟೆಗೆ ಜರುಗುವುದು. ಕಾರ್ಯಕ್ರಮದ ಸಾನ್ನಿಧ್ಯವನ್ನು ಪೂಜ್ಯ ಶ್ರೀ ಮ.ನಿ.ಪ್ರ. ಗುರುಸಿದ್ಧ ಮಹಾಸ್ವಾಮಿಗಳು ವಹಿಸಲಿದ್ದು, ಹಿರಿಯ ಸಾಹಿತಿಗಳಾದ ಶ್ರೀಮತಿ ನೀಲಗಂಗಾ ಚರಂತಿಮಠ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಸಾಹಿತ್ಯ ಸಂಸ್ಕೃತಿ ಚಿಂತಕರಾದ ಡಾ. ಮೈತ್ರೇಯಿಣಿ ಗದಿಗೆಪ್ಪಗೌಡರ ಅವರು “ಅಕ್ಕಮಹಾದೇವಿ ಭಾರತೀಯ ಆಧ್ಯಾತ್ಮಿಕ ಲೋಕದ ಸಚೇತನ ಶಕ್ತಿ” ಎಂಬ ವಿಷಯ ಕುರಿತು ಉಪನ್ಯಾಸ ನೀಡುವರು. ಸಾಹಿತಿಗಳಾದ ಶ್ರೀಮತಿ ಜ್ಯೋತಿ ಬಾದಾಮಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಶ್ರೀ ಕಾರಂಜಿಮಠದ ಕುಮಾರೇಶ್ವರ ಸಂಗೀತ ಪಾಠಶಾಲೆಯ ಮಕ್ಕಳಿಂದ ಪ್ರಾರ್ಥನೆ ಜರುಗುವುದು ಎಂದು ಶ್ರೀಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ‘ಎಲ್.ಐ.ಸಿ. ನಾಟಕೋತ್ಸವ ಮತ್ತು ರಂಗಸಖ ಪ್ರಶಸ್ತಿ ಪ್ರದಾನ ಸಮಾರಂಭ’

# ಎಲ್.ಆಯ್.ಸಿ. ಯು ಸಾಹಿತ್ಯ, ಕಲೆಗಳನ್ನು ಪ್ರೋತ್ಸಾಹಿಸುತ್ತ ಬಂದಿದೆ: ಬಿ. ಪಿ. ರವಿ

ಬೆಳಗಾವಿ: ಭಾರತೀಯ ಜೀವ ವಿಮಾ ನಿಗಮವು ತನ್ನ ಸೇವೆಯೊಂದಿಗೆಯೇ ಸಾಹಿತ್ಯ, ಕಲೆ, ಸಂಸ್ಕೃತಿಗಳನ್ನು ಪ್ರೋತ್ಸಾಹಿಸುತ್ತ ಬಂದಿದೆ. ರಂಗಭೂಮಿ ಕಾರ್ಯಗಳಿಂದ ಇಂದು ಹೆಸರನ್ನು ಮಾಡಿರುವ ರಂಗಸಂಪದ ಸಂಘಟನೆ ಪ್ರೇಕ್ಷಕರ ಮನಗೆದ್ದಿದೆ. ಈ ಸಂಸ್ಥೆಯು ‘ವಿಶ್ವರಂಗಭೂಮಿ ದಿನ’ ನಿಮಿತ್ತ ‘ಎಲ್.ಆಯ್.ಸಿ. ನಾಟಕೋತ್ಸವ’ವನ್ನು ಹಮ್ಮಿಕೊಂಡಿರುವುದು ಸಂತಸವನ್ನು ಉಂಟು ಮಾಡಿದೆ ಎಂದು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಭಾರತೀಯ ಜೀವ ವಿಮಾ ನಿಗಮದ ಹಿರಿಯ ವಿಭಾಗಾಧಿಕಾರಿ ಬಿ. ಪಿ. ರವಿಯವರು ಇಂದಿಲ್ಲಿ ಹೇಳಿದರು.

ವಿಶ್ವರಂಗಭೂಮಿ ದಿನಾಚರಣೆ ನಿಮಿತ್ತ ನಗರದ ರಂಗಸಂಪದದವರು ಭಾರತೀಯ ಜೀವ ವಿಮಾ ನಿಗಮ ಸಹಯೋಗದಲ್ಲಿ ಇದೇ ದಿ. 27 ಬುಧವಾರದಿಂದ ದಿ.27 ಶುಕ್ರವಾರದವರೆಗೆ ಮೂರು ದಿನಗಳ



‘ಎಲ್.ಐ.ಸಿ. ನಾಟಕೋತ್ಸವ ಮತ್ತು ರಂಗಸಖ ಪ್ರಶಸ್ತಿ ಪ್ರದಾನ ಸಮಾರಂಭ’ವನ್ನು ಕೋನವಾಳ ಬೀದಿಯಲ್ಲಿರುವ ಲೋಕಮಾನ್ಯ ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದರು ಅತಿಥಿಗಳಾಗಿ ಆಗಮಿಸಿದ್ದ ರವಿಯವರು ಮೇಲಿನಂತೆ ಅಭಿಪ್ರಾಯ ಪಟ್ಟರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಹಿರಿಯ ನ್ಯಾಯವಾದ ಎಸ್. ಎಂ. ಕುಲಕರ್ಣಿ, ಇಂದು ಬೆಳೆದು ನಿಂತಿರುವ ರಂಗಸಂಪದ ತಂಡದ ಹಿಂದೆ ಶ್ರೀಪತಿ ಮಂಜನುಬೈಲ ಅವರ ಶ್ರಮ ಬಹಳಷ್ಟಿದೆ. ಪ್ರೇಕ್ಷಕರಲ್ಲಿ ನಾಟಕ ನೋಡುವ ಅಭಿರುಚಿಂಯನ್ನುಂಟು ಮಾಡಿ ಸಾವರಾರು ಪ್ರೇಕ್ಷಕವೃಂದವನ್ನು ಹೊಂದಿದೆ. ಇಂದು ಡಾ. ಅರವಿಂದ ಕುಲಕರ್ಣಿಯವರು ಅತ್ಯಂತ ಯಶಸ್ವಿಯಾಗಿ ಅದನ್ನು ಮುಂದುವರೆಸಿಕೊಂಡು ಹೋಗುತ್ತಿದ್ದಾರೆ ಎಂದು ಹೇಳಿದರು.

ಹಿರಿಯ ರಂಗಕಲಾವಿದ ವಿನೋದ ಅಂಬೇಕರ ಅವರಿಗೆ ‘ರಂಗಸಖ’ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು. ಪ್ರಶಸ್ತಿಯನ್ನು ಸ್ವೀಕರಿಸಿ ಮಾತನಾಡಿದ ವಿನೋದ, ಈ ಪ್ರಶಸ್ತಿಯನ್ನು ಸ್ವೀಕರಿಸಲು ನನಗೆ ತುಂಬ ಸಂತೋಷವಾಗುತ್ತಿದೆ. 35 ವರ್ಷಗಳಿಂದ ನಟನೆ, ನಿರ್ದೇಶನ, ನೆಳಲು ಬೆಳಕು ಹೀಗೆ ರಂಗಭೂಮಿಯಲ್ಲಿ ನನ್ನನ್ನು ನಾನು ತೊಡಗಿಸಿಕೊಂಡಿದ್ದೇನೆ. ಈ ಕ್ಷೇತ್ರದಲ್ಲಿ ಏನನ್ನಾದರೂ ಸಾಧಿಸಿದ್ದೇನೆಂದರೆ ಅದಕ್ಕೆ ಮುಖ್ಯ ಕಾರಣ ರಂಗಸಂಪದ ಎಂದು ಹೇಳಿದರು. ಹಿರಿಯ ಕಲಾವಿದರಾದ ಶ್ರೀಮತಿ ನಲಿನಿ ವಿದ್ಯಾಸಾಗರ, ಗುರುದತ್ತ ಪೇಡ್ನೇಕರ ಇವರನ್ನು ಸನ್ಮಾನಿಸಲಾಯಿತು.

ಶ್ರೀರಂಗಪಟ್ಟಣದ ಗಮ್ಯ ತಂಡದವರಿಂದ ‘ಪರಿಣಯ ಪ್ರಸಂಗ’ ಹಾಸ್ಯನಾಟಕವು ಪ್ರದರ್ಶನಗೊಂಡಿತು. ರಚನೆ ಮತ್ತು ಮುರಳಿ ಶೃಂಗೇರಿಯವರದಾಗಿದ್ದು ವಿನ್ಯಾಸ, ನಿರ್ದೇಶನ ರಮೇಶ ಬೆಣಚಲ್ ಅವರದ್ದಾಗಿತ್ತು. ಈ ನಾಟಕೋತ್ಸವದಲ್ಲಿ ದಿ. 28 ಗುರುವಾರದಂದು ಸವದತ್ತಿಯ ರಂಗ ಆರಾಧನಾ ಸಾಂಸ್ಕೃತಿಕ ಸಂಘಟನೆಯವರಿಂದ ಶ್ರೀನಿವಾಸ ವೈದ್ಯ ರಚನೆಯ ‘ಬಾಸಿಂಗ ಬಲ’ ನಾಟಕ ಪ್ರದರ್ಶನಗೊಂಡಿತು. ನಾಟಕದ ರಂಗರೂಪ, ನಿರ್ದೇಶನ ಝಕೀರ ನದಾಫ ಅವರದ್ದಾಗಿತ್ತು.

ರಾಮಚಂದ್ರ ಕಟ್ಟಿ, ಚಿದಾನಂದ ವಾಳಕೆ, ಶ್ರೀಮತಿ ಪದ್ಮಾ ಕುಲಕರ್ಣಿ, ಗುರುನಾಥ ಕುಲಕರ್ಣಿ, ಯೋಗೇಶ ದೇಶಪಾಂಡೆ, ಅಶೋಕ ಕುಲಕರ್ಣಿ ಉಪಸ್ಥಿತರಿದ್ದರು. ಕು. ಪೂರ್ವಿ ರಾಜಪುರೋಹಿತ ಮತ್ತು ಕು. ಸ್ನೇಹಾ ಕುಲಕರ್ಣಿಯವರು ಹಾಡಿದ “ನಮ್ಮಮ್ಮ ಶಾರದೆ..” ಪ್ರಾರ್ಥನಾ ಗೀತೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ರಂಗಸಂಪದದ ಅಧ್ಯಕ್ಷ ಡಾ. ಅರವಿಂದ ಕುಲಕರ್ಣಿ ಸ್ವಗತಿಸಿದರು. ಶ್ರೀಪತಿ ಮಂಜನಬೈಲು ಪ್ರಸ್ತಾವಿಕ ನುಡಿಗಳನ್ನಾಡಿದರು. ಪ್ರಸಾದ ಕಾರಜೋಲ ವಂದಿಸಿದರು. ಶ್ರೀಮತಿ ವೀಣಾ ಹೆಗಡೆ ನಿರೂಪಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089